

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor : MARUTI BASAVANTAPPA HOSAMANI
Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
RNI REG No. : KARKAN/2016/75068

SIHI KAHI
KANNADA DAILY MORNING
BAGALKOT

Volume : 07 | Issue : 278 | Friday 18-07-2025 | E-mail : maruti.b.hosamani76@gmail.com | Page: 4 | Price : Rs. 1/-


## ರೋಟರಿ ಗದಗ ಸೆಂಟ್ರಲ್ ಪದಾಧಿಕಾರಿಗಳಿಗೆ ಪದಗ್ರಹಣ ಸಮಾರಂಭ



**ಸಿಹಿ ಕಹಿ ಸುದ್ದಿ,**
**ಗದಗ :** ರೋಟರಿ ಗದಗ ಸೆಂಟ್ರಲ್ ವತಿಯಿಂದ 2025-26 ನೇ. ಸಾಲಿನ ನೂತನ ಪದಾಧಿಕಾರಿಗಳಿಗೆ ಪದಗ್ರಹಣ ಸಮಾರಂಭವು ಸೇವಾಲಾಲ ನಗರದ ರೋಟರಿ ಭವನದಲ್ಲಿ ಜರುಗಿತು.

ಸಾನಿಧ್ಯವನ್ನು ಪರಮ ಪೂಜ್ಯ ಡಾ, ತೋಂಟದ ಸಿದ್ದರಾಮ ಮಹಾಸ್ವಾಮಿಗಳು ವಹಿಸಿದ್ದರು. ಡಿ.ಆರ್.ಎಫ್ ಸಿ ಪಿಡಿಜಿ ರೋ.ಗಣೇಶ ಭಟ್ ಅವರ ಅಮೃತ ಹಸ್ತದಿಂದ ನೂತನ ಪದಾಧಿಕಾರಿಗಳಿಗೆ ಸೇವಾ ದೀಕ್ಷೆಯನ್ನು ನೆರವೇರಿಸಿ ರೋಟರಿ ಗದಗ ಸೆಂಟ್ರಲ್ ಪ್ರಸಕ್ತ ಸಾಲಿನಲ್ಲಿ ಶಿಕ್ಷಣ, ಆರೋಗ್ಯ, ಸದಭಿರುಚಿಯ ಸಮಾಜ ಮುಖಿ ಕಾರ್ಯಗಳನ್ನು ಕೈಗೊಳ್ಳಲಿ ಎಂದರು. ಉಪಸ್ಥಿತರಿದ್ದ ಅಸಿಸ್ಟಂಟ್ ಗೌರ್ನರ್ ರೋ.ವಿ.ಕೆ ಗುರುಮಠ ತಾವು ಕ್ಲಬ್ ಬೆಳವಣಿಗೆಗೆ ಎಲ್ಲಾ ರೀತಿಯ ಸಹಕಾರ ನೀಡುವುದಾಗಿ ಹೇಳಿದರು. ಅಧ್ಯಕ್ಷರಾಗಿ ರೋ.ಚೇತನ ಅಂಗಡಿ, ಕಾರ್ಯದರ್ಶಿ ರೋ.ರಾಜು ಉಮನಾಬಾದಿ, ಖಜಾಂಚಿ ರೋ. ಡಾ, ಪ್ರಭು.ಗಂಜಿಹಾಳ, ಉಪಾಧ್ಯಕ್ಷರಾಗಿ ರೋ.ಟಿ ಎಸ್ ಪಾಟೀಲ, ಐಪಿಪಿ ರೋ.ಆರ್ ಬಿ ದಾನಪ್ಪಗೌಡರ, ಪ್ರೆಸಿಡೆಂಟ್ ಎಲೆಟ್ ರೋ.ಮಧುಸೂಧನ ಪುಣೇಕರ, ಸಾರ್ಜಂಟ್ ಅಟ್ ಆರ್ಮ್ಸ್ ರೋ. ಈಶಣ್ಣ ಗದ್ದಿಕೇರಿ, ನಿರ್ದೇಶಕ ಮಂಡಳಿಯಲ್ಲಿ ಕ್ಲಬ್ ಸೇವೆ ರೋ. ಪ್ರಕಾಶ ಉಗಲಾಟದ, ವೃತ್ತಿಪರ ಸೇವೆ ರೋ.ಮಂಜುನಾಥ ಬೇಲೇರಿ, ಸಮುದಾಯ ಸೇವೆ ರೋ. ಮುರುಗೇಶ ಬಡ್ನಿ, ಅಂತಾರಾಷ್ಟ್ರೀಯ ಸೇವೆ ರೋ.ಮಲ್ಲಿಕಾರ್ಜುನ ಐಲಿ, ಯುವಸೇವೆ ರೋ.ರಾಜು ಕಂಟಿಗೊಣ್ಣನವರ, ಸ್ಥಾಯಿ ಸಮಿತಿಯಲ್ಲಿ- ಆಡಳಿತ ರೋ.ಡಾ.ಸಿ.ಬಿ.ಹಿರೇಗೌಡ್ರ, ಸೇವಾಯೋಜನೆ ರೋ.ಎಸ್.ಆಯ್ ಅಣ್ಣಿಗೇರಿ, ಸದಸ್ಯತ್ವ ರೋ.ಎಸ್.ಸಿ.ಲಕ್ಕುಂಡಿ, ಪಿಆರ್ ಓ ಮತ್ತು ಬುಲೆಟಿನ್ ರೋ.ಹೆಚ್ ವಿ ಶೆಟ್ಟಿ, ಕ್ಲಬ್ ತರಬೇತುದಾರರು ರೋ. ಡಾ.ವಿ.ಸಿ.ಶಿರೋಳ, ರೋಟರಿ ಫೌಂಡೇಶನ್ ರೋ.ಶರಣಬಸಪ್ಪ ಗುಡಿಮನಿ, ಪೋಲಿಯೊ ಪಲ್ಸ್ ರೋ.ಸಂತೋಷ ತೋಟಗಂಟಿಮಠ, ಆರ್ ಸಿ ಸಿ/ಐಸಿಸಿ ರೋ.ಸಿ.ಜಿ.ಹಿರೇಗೌಡ್ರ, ಕ್ಲಬ್ ಇತಿಹಾಸಕಾರ ರೋ.ಮಲ್ಲಿಕಾರ್ಜುನ ಚಂದಪ್ಪನವರ,

ಸೋಶಿಯಲ್ ಮತ್ತು ಕಲ್ಚರಲ್ ರೋ.ವಿಜಯಕುಮಾರ ಹಿರೇಮಠ , ಸ್ಪೋರ್ಟ್ಸ್ ಕಮಿಟಿ ರೋ. ರಾಜು ಕುರುಡಗಿ ಪದಗ್ರಹಣ ಮಾಡಿದರು. ಸಾನಿಧ್ಯವಹಿಸಿದ್ದ ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು ರೋಟರಿ ಗದಗ ಸೆಂಟ್ರಲ್ ಉತ್ತಮವಾದ ಕಾರ್ಯಗಳನ್ನು ಮಾಡುವ ಮೂಲಕ ಹೆಸರಾಗಿದೆ. ಸೇವೆಗೆ ಇನ್ನೊಂದು ಹೆಸರೆ ರೋಟರಿ ಸಂಸ್ಥೆ ಆಗಿದೆ ಎಂದು ನೂತನ ಪದಾಧಿಕಾರಿಗಳಿಗೆ ಶುಭ ಕೋರಿದರು.

ಈ ಸಂದರ್ಭದಲ್ಲಿ ಶ್ರೀ ಸಿ.ಎಫ್ ಪಾಟೀಲ, ಶ್ರೀ ಸಿ.ಜಿ.ಚನ್ನಪ್ಪಗೌಡರ, ಮಹಿಳಾ ಸದಸ್ಯರಾಗಿ ಶ್ರೀಮತಿ ವಂದನಾ ಚೇ. ಅಂಗಡಿ, ಶ್ರೀಮತಿ ಜ್ಯೋತಿ ವಿ ಹಿರೇಮಠ, ಶ್ರೀಮತಿ ವಿದ್ಯಾ ಪ್ರ ಗಂಜಿಹಾಳ, ಶ್ರೀಮತಿ ಸುಜಾತ ಶ ಗುಡಿಮನಿ, ಶ್ರೀಮತಿ ಜ್ಯೋತಿ ರಾ. ಉಮನಾಬಾದಿ, ಶ್ರೀಮತಿ ಮಂಗಳಾ ಮ. ಬೇಲೇರಿ ನೂತನವಾಗಿ ಕ್ಲಬ್ ಸದಸ್ಯರಾಗಿ ಸೇರ್ಪಡೆಗೊಂಡರು. ರೋ. ಇಂಜನೀಯರ ಮೋಹನ ಹುಲಕೋಟಿ , ರೋ.ಶಶಿಧರ ದಿಂಡೂರ, ರೋ.ರಾಜಣ್ಣ ಮುಧೋಳ, ರೋ. ಪರಶುರಾಮ ನಾಯ್ಕರ್, ರೋ.ಸುರೇಶ ಅಬ್ಬಿಗೇರಿ ರೋ. ಮಂಜುನಾಥ ಕಬಾಡಿ, ರೋ.ಡಿ.ಜಿ.ಕೊಳ್ಳಿ, ರೋ. ಕೆ.ವಿ.ಪಾಟೀಲ, ರೋ.ಸುರೇಶ ನಿಡಗುಂದಿ ಮೊದಲಾದವರು ಪಾಲ್ಗೊಂಡಿದ್ದರು.

**– ಡಾ.ಪ್ರಭು ಗಂಜಿಹಾಳ**
**ಮೊ:9448775346**

## 14-ವರ್ಷದ ಅರುಣಾ ಬಾಲಕಿ ಮೇಲೆ ಅತ್ಯಾಚಾರ ಎಸಗಿ ಹತ್ಯೆ ಗೈದ ಆರೋಪಿಗಳಿಗೆ ಗಲ್ಲು ಶಿಕ್ಷೆಗೆ ಹಾಗೂ ಸೂಕ್ತ ಕಾನೂನು ಕ್ರಮ - ಕೈಗೊಳ್ಳಬೇಕೆಂದು ಒತ್ತಾಯಿಸಿ ಡಿ.ಸಿಯವರ ಮುಖಾಂತರ ಸಿ.ಎಂ ರವರಿಗೆ ಮನವಿ ಸಲ್ಲಿಕೆ






**ಸಿಹಿ ಕಹಿ ಸುದ್ದಿ,**
**ವಿಜಯನಗರ :** ವಿಜಯನಗರ ಜಿಲ್ಲೆ ಕರ್ನಾಟಕ ಅಲೆಮಾರಿ, ಅರೆ ಅಲೆಮಾರಿ ಮತ್ತು ವಿಮುಕ್ತ ಬುಡಕಟ್ಟುಗಳ ಒಕ್ಕೂಟ (ರಿ) ಬೆಂಗಳೂರು. ವಿಜಯನಗರ ಅಲ್ಲಾ ಶಿದ್ದೇಕ್ಕಾತರ ಕ್ಷೇಮಾಭಿವೃದ್ಧಿ ಸಂಘ ಹೊಸಪೇಟೆ ದಲಿತಪರ ಮತ್ತು ಪ್ರಗತಿಪರ ಸಂಘಟನೆಗಳು ಹೊಸಪೇಟೆ, ವಿಜಯನಗರ (ಜಿಲ್ಲೆ) ವತಿಯಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು. ಮಾನ್ಯ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

"ಬೆಂಗಳೂರು ನಗರ ಜಿಲ್ಲೆ ಮಾಗಡಿ ರಸ್ತೆಯ ತಾವರಗೇರಿಯಿಂದಗಾರೆಕೆಲಸಮಾಡಿಕೊಂಡು ಜೀವನೋಪಾಯ ದುಡಿಯಲು ಹೋಗಿದ್ದು, ಕೊಪ್ಪಳ ಜಿಲ್ಲೆಯ ಹೊಸಬಂಡಿ ಹರ್ಲಾಪುರ ಗ್ರಾಮದ ದಲಿತ ಪರಿಶಿಷ್ಟ ಜಾತಿ ಅಲಮಾರಿ ಸಿಳ್ಳೆಕ್ಯಾತ ಸಮುದಾಯದ ನಾಗಪ್ಪ ಮತ್ತು ರೇಣುಕಮ್ಮಾ ದಂಪತಿಗಳು ಮೂರು ಜನ ಗಂಡು ಮಕ್ಕಳು ಮತ್ತು ಒಬ್ಬಳು ಹೆಣ್ಣು ಮಗಳು 14 ವರ್ಷದ ಅರುಣಾ ಎಂಬ ಹೆಣ್ಣುಮಗಳನ್ನು ದುಷ್ಕರ್ಮಿಗಳು ಅತ್ಯಾಚಾರ ಮಾಡಿ ಮಾರಕಾಸ್ತ್ರಗಳಿಂದ ಮುಖಕ್ಕೆ ಹೊಡೆದು ಕೊಲೆ ಮಾಡಿದ್ದಾರೆ. ಪೋಲಿಸರು ಆರೋಪಿಗಳನ್ನು ಬಂಧಿಸಿ ಎಫ್.ಐ.ಆರ್. ದಾಖಲಿಸಿದ್ದಾರೆ. ಘಟನೆ ತಿಳಿದಾಕ್ಷಣ ರಾಜ್ಯದ ಎಲ್ಲಾ ಅಲೆಮಾರಿ ಸಮುದಾಯದವರು ಮುಖಂಡರುಗಳು, ಹಾಗೂ ಬೆಂಗಳೂರು, ರಾಮನಗರ ಜಿಲ್ಲೆ ನೊಂದ ಕುಟುಂಭವನ್ನು ಭೇಟಿಯಾಗಿ ಬಾಲಕಿ ಮೇಲೆ ಅಮಾನವೀಯ ಕ್ರೂರ ಕೃತ್ಯ ಗೈದ ಆರೋಪಿಗಳಿಗೆ ಗಲ್ಲು ಶಿಕ್ಷೆ ಕೊಡಬೇಕೆಂದು ದಲಿತ ಪರಿಶಿಷ್ಟ ಜಾತಿ ಅಲೆಮಾರಿ ಸಿಳ್ಳೆಕ್ಯಾತ ಸಮುದಾಯದ ಬಾಲಕಿಯ ಮೇಲೆ ಅತ್ಯಾಚಾರ ಎಸಗಿ ಕ್ರೂರವಾಗಿ ಹತ್ಯೆ ಮಾಡಿರುವ ಕೃತ್ಯ-ಕ್ಕೆ ಉಗ್ರವಾಗಿ ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಲ್ಲಿ ಅಲೆಮಾರಿ, ದಲಿತ ಸಂಘಟನೆಗಳು ಉಗ್ರವಾಗಿ ಹೋರಾಟ ಮೂಲಕ ಖಂಡನೆ ವ್ಯಕ್ತಪಡಿಸಿದ್ದಾರೆ. ಅಪರಾಧಿಗಳಿಗೆ ಗಲ್ಲು ಶಿಕ್ಷೆ ವಿಧಿಸುವಂತೆ ಹಾಗೂ ನೊಂದ ಕುಟುಂಬಕ್ಕೆ ಸರ್ಕಾರದಿಂದ ಎಲ್ಲಾ ಸೌಲಭ್ಯಗಳನ್ನು ಒದಗಿಸಿ ಮತ್ತು ಮಹಿಳಾ ಮಕ್ಕಳ ಆಯೋಗ, ಪೋಲಿಸ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಅಪರಾಧಿಗಳಿಗೆ ಕಠಿಣ ಶಿಕ್ಷೆ ವಿಧಿಸುವಂತೆ ವಿಜಯನಗರ ಜಿಲ್ಲೆಯ ಎಲ್ಲಾ ತಾಲೂಕುಗಳ ಪದಾಧಿಕಾರಿಗಳು ಅಲೆಮಾರಿ ಮುಖಂಡರುಗಳು ಮತ್ತು ದಲಿತಪರ ಸಂಘಟನೆಗಳು, ಪ್ರಗತಿಪರ ಚಿಂತಕರು, ಕಾರ್ಯಕಾರಿಣಿ ಸಮಿತಿ ಸದಸ್ಯರುಗಳು ಜಿಲ್ಲಾ ಅನುಷ್ಠಾನ ಸಮಿತಿ, ಸದಸ್ಯರುಗಳು, ಗೌರವ ಸದಸ್ಯರುಗಳು ಸರ್ವ ಸದಸ್ಯರುಗಳು ಈ ಮೂಲಕ ನ್ಯಾಯ ಒದಗಿಸಿ ಕೊಡಬೇಕೆಂದು ನನಗೆ ಪತ್ರವನ್ನು ಸಲ್ಲಿಸಿದರು ಈ ಸಂದರ್ಭದಲ್ಲಿ ಮುಖಂಡರುಗಳಾದ

ಸಿದ್ದು ಬೆಳಗಲ್,ಕಿನ್ನೂರಿ ಶೇಖಪ್ಪ, ಜೆ.ರಮೇಶ, ಸಣ್ಣಮಾರೆಪ್ಪ, ಜೆ.ಶಿವಕುಮಾರ್, ಶೇಖರ್, ಹಂಪಯ್ಯ, ಮಾರುತಿ, ರಾಜಕುಮಾರ್, ಜಂಬಯ್ಯನಾಯಕ, ಈ ಸಂದರ್ಭದಲ್ಲಿ ಹಲವಾರು ಮುಖಂಡರು ಉಪಸ್ಥಿತರಿದ್ದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಮಾಲತೇಶ್.ಶೆಟ್ಟರ್.ಹೊಸಪೇಟೆ**

## ಡಾ. ಪ್ರಸನ್ನ ನಾಡಿಗರ್‌ರವರಿಗೆ ಸ್ಟಾರ್ ಆಫ್: ಕರ್ನಾಟಕ ಪ್ರಶಸ್ತಿ ಪ್ರಧಾನ



**ಸಿಹಿ ಕಹಿ ಸುದ್ದಿ,**
**ಬೆಂಗಳೂರು :** ಕಾವ್ಯಶ್ರೀ ಚಾರಿಟಬಲ್ ಟ್ರಸ್ಟ್ ಕರ್ನಾಟಕ ಹಾಗೂ ರೋಟರಿ ಕ್ಲಬ್ ಆಫ್ ಬೆಂಗಳೂರು ಜಯನಗರ ದಿನೇಶ್ ಫೌಂಡೇಶನ್ ಆಯೋಜಿಸಿದ ಕನ್ನಡ ಸಾಹಿತ್ಯ ಸಂಭ್ರಮ ಕಾರ್ಯಕ್ರಮದಲ್ಲಿ ಡಾ, ಪ್ರಸನ್ನ ನಾಡಿಗೇರ ರವರಿಗೆ

ಶಿಕ್ಷಣ ಕ್ಷೇತ್ರದಲ್ಲಿ ಗುರುತಿಸಿ ಸ್ಟಾರ್ ಆಫ್ ಕರ್ನಾಟಕ ನೀಡಿ ತಮ್ಮನ್ನು ತಾವು ತೊಡಗಿಸಿ ಕೊಳ್ಳುವುದರ ಜೊತೆಗೆ ಕಲೆ ಸಾಹಿತ್ಯ ಸಂಘಟನೆ ನಿಟ್ಟಿನಲ್ಲಿ ಸ್ಟಾರ್ ಆಫ್ ಕರ್ನಾಟಕ 2025 ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಆರೂಢ ಭಾರತಿ ಮಹಾಸ್ವಾಮಿಗಳು ಸಿದ್ದಾರೂಢ ಮಿಶನ್ ಟ್ರಸ್ಟ್ ರಾಮ ಹಳ್ಳಿ, ಖ್ಯಾತ ಸಾಹಿತಿಗಳಾದ ಬೈರ ಮಂಗಲ ರಾಮೇಗೌಡ , ಹಿರಿಯ ಸಾಹಿತಿ ಸಿ.ಸಿ ರಾಮಲಿಂಗೇಶ್ವರ, ಕಾವ್ಯಶ್ರೀ ಚಾರಿ ಟಬಲ್ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷರಾದ ಡಾ, ಶಿವಣ್ಣ ಜಿ, ಚೇತನ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷರು ಡಾ, ಚಂದ್ರಶೇಖರ ಮಾಡಲಗೇರಿ, ದಿನೇಶ್ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷರು ದಿನೇಶ್ ನಾಯಕ್, ರೋಟರಿ ಕ್ಲಬ್ ಬೆಂಗಳೂರು ರೋಟರಿಯನ್ ಡಾ, ಪುರುಷೋತ್ತಮ್ ಬಂಗ್, ಚಲನ ಚಿತ್ರ ನಟಿಯಾರಾದ ಮಾಲತಿಶ್ರೀ ಮೈಸೂರು, ಸಂಗಮನಾಥಪಿ ಸಜ್ಜನ, ಭಾಗ್ಯಶ್ರೀ ರಜಪೂತ, ಸಂಗೀತ ಮಠಪತಿ, ಕೆಎಸ್ ವೀರೇಶ್, ಹೇಮಾವತಿ ಡಾ, ಶಿವಣ್ಣ ಜಿ, ಸೇರಿದಂತೆ ಸ್ಟಾರ್ ಕರ್ನಾಟಕ ಪ್ರಶಸ್ತಿ ಪುರಸ್ಕೃತರು, ಸದ್ಗುರು ದ್ರೋಣಾಚಾರ್ಯ ಪ್ರಶಸ್ತಿ ಪುರಸ್ಕೃತರು, ಕರ್ನಾಟಕ ರಾಜ್ಯದ ಅತ್ಯುತ್ತಮ ಶಾಲೆಗಳಿಗೆ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ ಜರುಗಿತು. ಗಣ್ಯರ ಸಮ್ಮುಖದಲ್ಲಿ ಪ್ರಶಸ್ತಿ ಪ್ರಧಾನ ಮಾಡಲಾಯಿತು.

ಡಾ, ಪ್ರಸನ್ನ ನಾಡಿಗೇರ್ ಸ್ಟಾರ್ ಆಫ್ ಕರ್ನಾಟಕ ಪ್ರಶಸ್ತಿ ಪುರಸ್ಕೃತ ಅಭಿಮಾನಿಗಳು ಹಿತೈಷಿಗಳು ಸೇರಿದಂತೆ ಅನೇಕರು ಅಭಿನಂದನೆಗಳು ಸಲ್ಲಿಸಿದ್ದಾರೆ.

**ಹೋಬಳಿ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಕೆ.ಎಸ್ ವೀರೇಶ್. ಕೆ.ಹೊಸಹಳ್ಳಿ**

## ಅಪ್ಪಣ್ಣ ಕಾಯಕಜೀವಿ, ಸೇವಾ ನಿಷ್ಠೆ ಉಳ್ಳವರಾಗಿದ್ದರು: ಸವದಿ




**ರಬಕವಿ-ಬನಹಟ್ಟಿ :** ಅನುಭವ ಮಂಟಪದಲ್ಲಿ ಬಸವಣ್ಣನವರ ಕಾರ್ಯ ದರ್ಶಿಯಾಗಿ ಸೇವೆ ಸಲ್ಲಿಸಿದ ಹಡಪದ ಅಪ್ಪಣ್ಣನವರು ಕೂಡಾ ಕಾಯಕ ಯೋಗಿಗಳಾಗಿದ್ದರು.

ಅವರು ಅನುಭವ ಮಂಟಪದ ಮಹಾನುಭಾವಿ ಹಾಗೂ ಅನುಪಮ ಚೇತನ ಎನಿಸಿದ್ದರು. ಅಪ್ಪಣ್ಣ ಕಾಯಕ ನಿಷ್ಠೆ, ಜೀವನ ನಿಷ್ಠೆ ಮತ್ತು ಸೇವಾ ನಿಷ್ಠೆ ಉಳ್ಳವರಾಗಿದ್ದರು.

ನಾವು ಹಡಪದ ಅಪ್ಪಣ್ಣನವರ ಹಾಗೂ ಶರಣರ ನಡೆ ನುಡಿಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ಜೀವನ ನಿರ್ವಹಣೆ ಮಾಡಬೇಕು. ಸಮಾಜ ಬಾಂಧವರು ಕೂಡಾ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಅವರು ಗುರುವಾರ ಇಲ್ಲಿನ ತಹಶೀಲ್ದಾರ್ ಕಾರ್ಯಾಲಯದಲ್ಲಿ ನಡೆದ ಹಡಪದ ಅಪ್ಪಣ್ಣ ಜಯಂತ್ಯೋತ್ಸವದ ಸಂದರ್ಭದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಬಸವಣ್ಣ ಮತ್ತು ಶಿವಶರಣ-ರು ಹನ್ನೆರಡನೆಯ ಶತಮಾನದಲ್ಲಿ ಜಾತ್ಯಾತೀತ ಸಮಾಜವನ್ನು ನಿರ್ಮಾಣ ಮಾಡಿದ್ದರು. ಬಸವಣ್ಣನವರು ಸಾಮಾನ್ಯರನ್ನು ಕೂಡಾ ಶರಣ-ರನ್ನಾಗಿ ಮಾಡಿದ್ದರು. ಶರಣರು ಯಾವುದೇ ಅಧಿಕಾರಕ್ಕಾಗಿ ಆಸೆ ಪಡಲಿಲ್ಲ.

ಯಾವುದೆ ಆಸೆ ಆಮಿಷಗಳಿಗೆ ಒಳಗಾಗಲಿಲ್ಲ. ಅವರ ತತ್ವ ಸಿದ್ಧಾಂತಗಳನ್ನು ನಾವು ಕೂಡಾ ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ತಹಶೀಲ್ದಾರ್ ಗಿರೀಶ ಸ್ವಾದಿ, ಶಿರಸ್ತೆದಾರ ರಾಜಶೇಖರ ಸಾತಿಹಾಳ, ಕಂದಾಯ ನಿರೀಕ್ಷಕ ಪ್ರಕಾಶ ಮಠಪತಿ, ಸದಾಶಿವ ಕುಂಬಾರ, ಶಿಕ್ಷಣ ಸಂಂ-ಯೋಜಕ ಬಿ. ಎಂ. ಹಳೆಮನಿ, ಬುದ್ದಪ್ಪ ಕುಂದಗೋಳ, ಭೀಮಶಿ ಹೊರಗಿಮನಿ, ಗಣೇಶ ನಾವಿ, ಲಕ್ಕಪ್ಪ ನಾವಿ, ಕುಮಾರ ಹಳಿಂಗಳಿ, ಬಾಳು ನಾವಿ, ಕುಮಾರ ನಾವಿ, ರಾಜು ನಾವಿ, ಹಣಮಂತ ಕುಂದಗೋಳ, ಅಶೋಕ ಚಿಮ್ಮಡ, ಪ್ರಭು ನಾವಿ ಸೇರಿದಂತೆ ಇನ್ನೂ ಅನೇಕರು ಉಪಸ್ಥಿತರಿದ್ದರು.

## ಕಾ.ನಿ.ಪ ಸಂಘದ ವಾರ್ಷಿಕ ಪ್ರಶಸ್ತಿಗೆ - ಪತ್ರಕರ್ತ ಹೊಸೂರ ಆಯ್ಕೆ



**ಸಿಹಿ ಕಹಿ ಸುದ್ದಿ,**
**ಇಂಡಿ :** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ವತಿಯಿಂದ ನೀಡಲಾಗುವ 2025 ನೇ. ಸಾಲಿನ ವಾರ್ಷಿಕ ಪ್ರಶಸ್ತಿಗೆ ರವಿವಾಣಿ ದಿನ ಪತ್ರಿಕೆಯ ಇಂಡಿ ತಾಲೂಕಾ ಹಿರಿಯ ಪತ್ರಕರ್ತರಾದ ಭೀರಪ್ಪ ಎಸ್ ಹೊಸೂರ ಆಯ್ಕೆಯಾಗಿದ್ದಾರೆ ಎಂದು ಕಾನಿಪ ಇಂಡಿ ತಾಲೂಕ ಅಧ್ಯಕ್ಷ ಅಬುಶ್ಯಾಮ ಹವಾಲ್ದಾರ ಹಾಗೂ ಪ್ರಧಾನ ಕಾರ್ಯದರ್ಶಿಯಾದ ಲಾಲ್ ಸಿಂಗ್ ರಾಠೋಡ ತಿಳಿಸಿದ್ದಾರೆ. ಜುಲೈ 19 ಶನಿವಾರ ವಿಜಯಪುರದ ಕಂದಗಲ್ ಹಣಮಂತರಾಯ ರಂಗ ಮಂದಿರದಲ್ಲಿ ನಡೆಯಲಿರುವ ಪತ್ರಿಕಾ ದಿನಾಚರಣೆ ಸಮಾರಂಭದಲ್ಲಿ ಪತ್ರಕರ್ತರ ವಾರ್ಷಿಕ ಪ್ರಶಸ್ತಿಯನ್ನು ಭೀರಪ್ಪ ಎಸ್ ಹೊಸೂರ ಅವರಿಗೆ ನೀಡಲಾಗುತ್ತದೆ ಎಂದು ತಿಳಿಸಿದರು.

## ಗುರಿ ತೋರಿದ ಗುರುವಿಗೆ ನಮನ



**ಬೆಂಗಳೂರು:** ಗುರುಪೌರ್ಣಿಮೆಯ ಶುಭ ಸಂದರ್ಭದಲ್ಲಿ ಖ್ಯಾತ ಶಿಕ್ಷಣ ತಜ್ಞಪ್ರೊ. ಎನ್. ಎಸ್. ನಂಜುಂಡ ಶಾಸ್ತ್ರಿಯವರನ್ನು ಸ್ಮರಿಸಿ, ಗುರು ವಂದನಾ ಕಾರ್ಯಕ್ರಮವನ್ನು ಬೆಂಗಳೂರಿನ ಕನ್ನಡ ಯುವಜನ ಸಂಘದಲ್ಲಿ ಹಿರಿಯ ವಕೀಲ ಬಿ. ಎಸ್. ಜ್ಞಾನಪ್ರಕಾಶರವರ ನೇತೃತ್ವದಲ್ಲಿ ಆಯೋಜಿಸಲಾಗಿ-ತ್ತು. ಕಾರ್ಯಕ್ರಮದ ಉದ್ಘಾಟನೆಯನ್ನು ಡಾ। ಸಿ. ಸೋಮಶೇಖರ್, ನಿವೃತ್ತ ಐಎಎಸ್ ಅಧಿಕಾರಿಗಳು: ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರುಮತ್ತುಮದನ್‌ಪಟೇಲ್, ಚಲನಚಿತ್ರ ನಿರ್ಮಾಪಕರು, ನಟ-ರು, ನಿರ್ದೇಶಕರು ಗಣ್ಯರೊಂದಿಗೆ ನೆರವೇರಿಸಿದರು. ಇದೇ ಸಂದರ್ಭದಲ್ಲಿ ನಂಜುಂಡ ಶಾಸ್ತ್ರಿಗಳ ಕುರಿತು ವಿಶೇಷ ಸಂಚಿಕೆಯನ್ನು ಲೋಕಾರ್ಪಣೆ ಗೊಳಿಸಲಾಯಿತು.

ಪ್ರಾಸ್ತಾವಿಕ ನುಡಿಯನ್ನು ಜ್ಞಾನಪ್ರಕಾಶರವರು, ಗುರು ಶಿಷ್ಯರ ಬಾಂಧವ್ಯದ ಕು-ರಿತು ಸೋಮಶೇಖರವರು ಮಾತನಾಡಿದರು. ಗುರುಗಳ ಕುರಿತು ಸ್ವರಚಿತ ಕವನವನ್ನು ಶ್ರೀಮತಿ ಲತಾ ಕೆ.ಎಸ್.ಹೆಗಡೆ ವಾಚಿಸಿದರೆ, ಇಂದಿನ ಶಿಕ್ಷಣ ಮತ್ತು ಮಾಧ್ಯಮಗಳ ಕುರಿತು ಮದನ್ ಪಟೇಲರು, ಭಾರತೀಯ ಶಿಕ್ಷಣ ಪರಂಪರೆಯ ಬಗ್ಗೆ ಹಾಸ್ಯ ಬ್ರಹ್ಮ ಎಮ್.ಎಸ್.ನರಸಿಂಹ ಮೂರ್ತಿಯವರು, ತಾನು ಕಂಡಂತೆ ಎನ್‌ಎನ್‌ಎಸ್ ಬಗ್ಗೆ ಸುವರ್ಣ ಅಮರನಾಥ-ವರು ಮಾತನಾಡಿದರು. ಎನ್.ಎನ್.ಎಸ್. ಅವರ ಕುರಿತು ಉಪನ್ಯಾಸವನ್ನು ಶ್ರೀಮತಿ ಮಂಗಳಕುಮಾರಿಯುವರು ನಡೆಸಿಕೊಟ್ಟರು.

ಅಧ್ಯಕ್ಷೀಯ ನುಡಿಗಳನ್ನು ಜಗದೀಶ್‌ರೆಡ್ಡಿ,ಕನ್ನಡಯುವಜನ ಸಂಘದವರು ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಕನ್ನಡ ಯುವಜನ ಸಂಘದವರು, ಮಾಧ್ಯಮಪ್ರತಿನಿಧಿಗಳುಉಮೇಶ್ ಪತ್ರಿಕೆಯ ಸಂಪಾದಕರಾದ ಜ್ಯೋತಿಷ್ವರಪ್ಪನವರು, ಜಾಗೃತಿ ಟ್ರಸ್ಟಿನ ಅಧ್ಯಕ್ಷರಾದ ಬಿ.ನಾಗೇಶರವರು, ಸಮತ ಟ್ರಸ್ಟಿನ ಸದಸ್ಯರು, ಎನ್.ಎನ್.ಎಸ್ ರವರ ಕುಟುಂಬದವರು ಮತ್ತು ಹಳೆಯ ವಿದ್ಯಾರ್ಥಿ ವೃಂದದವರೊಂದಿಗೆ, ಅನೇಕ ಆಹ್ವಾನಿತರು ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರುಗು ನೀಡಿದರು.

## ಅಧ್ಯಕ್ಷರಾಗಿ ಬನಾಜ, ಉಪಾಧ್ಯಕ್ಷರಾಗಿ ಸತ್ತಿಗೇರಿ ಅವಿರೋಧ ಆಯ್ಕೆ



**ಮಹಾಲಿಂಗಪುರ :** ಸಮೀಪದ ಕೆಸರಗೊಪ್ಪ ಗ್ರಾಮದ ಸಸಾಲಟ್ಟಿ ತೋಟದ ಹಾಲು ಉತ್ಪಾದಕರ ಸಹಕಾರಿ ಸಂಘದ ನೂತನ ಅಧ್ಯಕ್ಷರಾಗಿ ದುಂಡಪ್ಪ ಜ್ಯೋತೆಪ್ಪ ಬನಾಜ, ಉಪಾಧ್ಯಕ್ಷರಾಗಿ ಮಹಾದೇವ ಮಹಾಲಿಂಗಪ್ಪ ಸತ್ತಿಗೇರಿ ಅವಿರೋಧ ಆಯ್ಕೆಯಾಗಿದ್ದಾರೆಂದು ರಿರ್ಟನಿಂಗ್ ಆಫೀಸರ್ ಜಿ. ಎಸ್. ನಂದಿಗೌಡ್ರ ಘೋಷಿಸಿದರು.

ಕಾಂಗ್ರೆಸ್ ಮುಖಂಡ ಸಿದ್ದು ಕೊಣ್ಣೂರ, ಹಿರಿಯರಾದ ದುಂಡಪ್ಪ ಜಾಧವ,

ಮಲ್ಲಪ್ಪ ಸಿಂಗಾಡಿ, ಭೀಮಸಿ ಸಸಾಲಟ್ಟಿ, ಮಹಾದೇವ ಸಸಾಲಟ್ಟಿ, ನಾರಾಯಣ ನಿಕ್ಕಂ ಸೇರಿದಂತೆ ಹಲವರು ಸನ್ಮಾನಿಸಿ ಅಭಿನಂದಿಸಿದರು.

ಸಂಘದ ಸದಸ್ಯರಾದ ಅರ್ಜುನ ಸಸಾಲಟ್ಟಿ, ತಿಪ್ಪಣ್ಣ ಹುಣಶಿಕಟ್ಟಿ, ಶ್ರೀಮಂತ ಸತ್ತಿಗೇರಿ, ಸಣ್ಣಪ್ಪ ಸಸಾಲಟ್ಟಿ, ವಿಠ್ಠಲ ಮಾದಪ್ಪನವರ, ನಿಂಗಪ್ಪ ಬ್ಯಾಕೂಡ, ಮಲ್ಲಪ್ಪ ಜಗದಾಳ, ಗೀತಾ ಸಸಾಲಟ್ಟಿ, ರೇಣುಕಾ ಕಾರಜೋಳ, ಈರಪ್ಪ ತಳವಾರ, ಸಂಘದ ಮುಖ್ಯ ಕಾರ್ಯನಿರ್ವಾಹಕ ಹಾಲಪ್ಪ ನಾಗರಾಳ, ಸಹಾಯಕ ಸಿಬ್ಬಂದಿ ಹಣಮಂತ ಹಂದಿಗುಂದ ಸೇ-ರಿದಂತೆ ಹಲವರು ಹಾಜರಿದ್ದರು.

# ಹಿಟ್ ಅಂಡ್ ರನ್ ಪ್ರಕರಣದಲ್ಲಿ ಮರಣ ಹೊಂದಿದ ಮತ್ತು ತೀವ್ರ ಗಾಯಗೊಂಡವರಿಗೆ ಪರಿಹಾರ: ಅರಿವು ಮೂಡಿಸಿ

**ಕೊಪ್ಪಳ :** ಹಿಟ್ ಅಂಡ್ ರನ್ ಪ್ರಕರಣಗಳಲ್ಲಿ ಮರಣ ಹೊಂದಿದವರಿಗೆ ಮತ್ತು ತೀವ್ರ ಗಾಯಗೊಂಡವರಿಗೆ ಪರಿಹಾರ ನೀಡಲು ಅನುಷ್ಠಾನಗೊಳಿಸಲಾಗಿರುವ ಯೋಜನೆಯ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಸಂಬಂಧಿಸಿದ ಇಲಾಖೆಗಳ ಅಧಿಕಾ-ರಿಗಳು ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ ಅವರು ಸೂಚನೆ ನೀಡಿದ್ದಾರೆ.

ಹಿಟ್ ಅಂಡ್ ರನ್ ಯೋಜನೆಗೆ ಸಂಬಂಧಿಸಿದಂತೆ ಸರ್ಕಾರದ ಆದೇಶಗಳನ್ವಯ ಕೇಂದ್ರ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯವು ಮೋಟಾರು ವಾಹನಗಳ ಕಾಯಿದೆಯಡಿ ಅಪರಿಚಿತ ವಾಹನ ಡಿಕ್ಕಿಯಾಗಿ ಅಪಘಾತದಲ್ಲಿ ಮರಣ ಹೊಂದಿದ ವಾರಸುದಾರರಿಗೆ ರೂ.2 ಲಕ್ಷಗಳು ಮತ್ತು ತೀವು ಗಾಯಗೊಂಡವ-ರಿಗೆ ರೂ.50.000 ಗಳನ್ನು ಪರಿಹಾರ ನೀಡಲು ಆದೇಶಿಸಲಾಗಿರುತ್ತದ. ಈ ಯೋಜನೆಯಲ್ಲಿ ಸಂತ್ರಸ್ತರು ಸಲ್ಲಿಸಿದ ಅರ್ಜಿ ಮತ್ತು ದಾಖಲೆಗಳನ್ನು ತಹಶೀಲ್ದಾರ ಅಥವಾ ಉಪವಿಭಾಗಾಧಿಕಾರಿಗಳು 30 ದಿನಗಳ ಒಳಗಾಗಿ ಪರಿಶೀಲಿಸಿ ಶಿಫಾರಸ್ಸು ಮಾಡಿ ಪರಿಹಾರದ ಆದೇಶಕ್ಕಾಗಿ ಜಿಲ್ಲಾಧಿಕಾರಿಗಳ ಕಚೇ-ರಿಗೆ ಸಲ್ಲಿಸಬೇಕಾಗುತ್ತದೆ ನಂತರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಈ ಪ್ರಸ್ತಾವನೆಯನ್ನು ಪರಿಶೀಲಿಸಿ 15 ದಿನದೊಳಗೆ ಪರಿಹಾರ ಮಂಜೂರಾತಿ ಆದೇಶವನ್ನು ಜನರಲ್ ಇನ್ಸೂರೆನ್ಸ್ ಕೌನ್ಸಿಲ್ (General Insurance Council) ಇವರಿಗೆ ಸಲ್ಲಿಸಲಾಗುತ್ತದೆ.

ಆದರೆ, ಈ ಯೋಜನಯು ಕಾಲಮಿತಿಯೊಳಗ ಕಾರ್ಯನಿರ್ವಹಿಸಬೇಕಾಗಿದ್ದರೂಸಹಸಂಬಂಧಪಟ್ಟ ಪ್ರಾಧಿಕಾರದಲ್ಲಿ ಈ ಯೋಜನ ಅನುಷ್ಠಾನಗೊಂಡ ಮಹತ್ವವನ್ನು ಅರಿಯದೇ ಕಾಲ ವಿಳಂಬದಲ್ಲಿ ಕಾರ್ಯ ನಿರ್ವಹಿಸಲಾಗಿತ್ತಿದ್ದು, ಇದರಿಂದ ಪರಿಹಾರ ಕೋರಿ ಸಲ್ಲಿಸುವ ಅರ್ಜಿಗಳನ್ನು ಆದ್ಯತೆ ಮೇರೆಗೆ ಪರಿಗಣಿಸಿ ನಿರ್ವಹಿಸದೇ ಇರುವ ಪ್ರಯುಕ್ತ ಸಂತ್ರಸ್ತ-ರಿಗೆ ಪರಿಹಾರದ ಅವಶ್ಯಕತವಿರುವ ಸಮಯದಲ್ಲಿ ಸಿಗದೇ ಕಷ್ಟ ಪಡುತ್ತಿರುವುದು ಗಮನಿಸಲಾಗಿದೆ.

ಈ ಪ್ರಯುಕ್ತ ಆ ಯೋಜನೆಯಡಿ ಸಂತ್ರಸ್ಥರು ನಿಗದಿತ ಸಮಯದಲ್ಲಿಪರಿಹಾರಪಡೆಯಲುಸರ್ಕಾರದಆದೇಶ ಅಥವಾ ಸುತ್ತೋಲೆ ಅಥವಾ ಮಾರ್ಗಸೂಚಿಗಳನ್ನಯ ಕಡ್ಡಾಯವಾಗಿ ಕಾರ್ಯನಿರ್ವಹಿಸಬೇಕಾಗಿರುವುದು ಎಲ್ಲರ ಜವಾಬ್ದಾರಿಯಾಗಿದ್ದು, ಈ ಯೋಜನೆಯಲ್ಲಿ ಪ್ರಮುಖವಾಗಿ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು ಬೆಂಗಳೂರು ರವರ ಸುತ್ತೋಲೆಯಲ್ಲಿ ಪೊಲೀಸ್ ಠಾಣಾಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಹಿಟ್ ಅಂಡ್ ರನ್ ಯೋಜನೆಯಡಿ ಪರಿಹಾರ ಕು-ರಿತು ಕಾರ್ಯವಿಧಾನ:

ಅವಘಾತ ನಡೆದ ವ್ಯಾಪ್ತಿಯ ಪೊಲೀಸ್ ಠಾಣಾಧಿಕಾ-ರಿಗಳು ಎಫ್.ಐ.ಆರ್ ದಾಖಲಿಸಿ, ಸಂತ್ರಸ್ಥ-ರಿಗೆ ವರಿಹಾರಕ್ಕಾಗಿ ಅರ್ಜಿ ನಮೂನೆ ನೀಡಿ ಮೃತ ಅಥವಾ ತೀವು ಗಾಯಗೊಂಡ ಕಟುಂಬದವ-ರಿಗೆ ಅಗತ್ಯ ದಾಖಲೆಯೊಂದಿಗೆ ಕ್ಲೇಮ್ ಎನ್‌ಕ್ವೈರಿ ಆಫಿಸರ್ (Claim Enquiry Officer) ಆಗಿರುವ ತಹಶೀಲ್ದಾರ್ ಅಥವಾ ಉಪವಿಭಾಗಾಧಿಕಾರಿಗಳ ರವರಿಗೆ ಅರ್ಜಿಯನ್ನು ಸಲ್ಲಿಸಲು ತಿಳುವಳಿಕೆ ನೀಡಿ ಸಂತ್ರಜ್ಞರಿಗೆ ಪರಿಹಾರ ಪಡೆಯುವಂತೆ ಸಹಕ-ರಿಸಬೇಕು.

ಪರಿಹಾರ ಕೋರಿ ಅರ್ಜಿ ಸಲ್ಲಿಸುವ ವಾರಸುದಾರರು ಅಥವಾ ಭಾದಿತ ವ್ಯಕ್ತಿಯು ಸಂಬಂಧಿಸಿದ ಠಾಣಾಧಿಕಾರಿಗಳಿಂದ ಅರ್ಜಿ ನಮೂನೆ-1ನ್ನು ಪಡೆದು ಎಫ್.ಐ.ಆರ್. "ಸಿ" ರಿಪೋರ್ಟ್, ಬ್ಯಾಂಕ್ ವಾಸ್ ಬುಕ್ ಪ್ರತಿ, ನಮೂನೆ-4 (Under Taking) ಹಾಗೂ ಮೃತ ಪ್ರಕರಣಗಳಲ್ಲಿ ಪೋಸ್ಟ್ ಮಾರ್ಟಮ್ ವರದಿ ಮರಣ ಪ್ರಮಾಣ ಪತ್ರ ಅಥವಾ ತೀವ್ರ ಗಾಯಗೊಂಡಿದ್ದಲ್ಲಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ಬಗ್ಗೆ, ದಾಖಲೆಗಳು ಮತ್ತು ಆಧಾರ ಪ್ರತಿಗಳೊಂದಿಗೆ ಅವಘಾತ ಸಂಭವಿಸಿದ ವ್ಯಾಪ್ತಿಯ ಕ್ಲೇಮ್ ಎನ್‌ಕ್ವೈರಿ ಆಫಿಸರ್ ಆಗಿರುವ ತಹಶೀಲ್ದಾರ್ ಅಥವಾ ಉಪವಿಭಾಗಾಧಿಕಾರಿಗಳಿಗೆ ಸಲ್ಲಿಸಬೇಕು.

ತದನಂತರ ಸಂಬಂಧಪಟ್ಟ ಉಪವಿಭಾಗಾಧಿಕಾರಿ ಅಥವಾ ತಹಶೀಲ್ದಾರ್‌ರವರು ಪರಿಹಾರ ಅರ್ಜಿ ಹಾಗೂ ದಾಖಲೆಗಳನ್ನು ಪರಿಶೀಲಿಸಿ ನಮೂನೆ-2ರಲ್ಲಿ ಸದರಿಯವರ ಸೂಕ್ತ ಶಿಫಾರಸಿ ನೊಂದಿಗೆ ಅರ್ಜಿ ದಿನಾಂಕದಿಂದ 30 ದಿನದೊಳಗಾಗಿ ಜಿಲ್ಲಾಧಿಕಾರಿಗಳು ಕ್ಲೇಮ್ ಸೆಟಲ್‌ಮೆಂಟ್ ಆಫಿಸರ್ (Claim Settlement Officer)ಆಗಿದ್ದು ಇವರಿಗೆ ಸಲ್ಲಿಸಬೇಕು.

ನಂತರ ಜಿಲ್ಲಾಧಿಕಾರಿಗಳು, ಪರಿಹಾರ ಅರ್ಜಿಯನ್ನು ಪರಿಶೀಲಿಸಿ ನಮೂನೆ-3 ರಲ್ಲಿ ಪರಿಹಾರ ಕುರಿತು ಆದೇಶ ಮಂಜೂರು ಮಾಡಿ ಜನರಲ್ ಇನ್ಸೂರೆನ್ಸ್ ಕೌನ್ಸಿಲ್, ಇವರಿಗೆ ಪರಿಹಾರ ಪಾವತಿಸುವಂತೆ ಪ್ರಸ್ತಾವನೆಯೊಂದಿಗೆ ಅದೇಶದ ಪ್ರತಿಯನ್ನು 15 ದಿನದೊಳಗಾಗಿ ಸಲ್ಲಿಸಲಾಗುತ್ತದೆ.

ನಂತರ ಜನರಲ್ ಇನ್ಸೂರೆನ್ಸ್ ಕೌನ್ಸಿಲ್ ಇವರಿಂದ ಪರಿಶೀಲನೆಗೊಂಡು ಸಂಬಂಧಪಟ್ಟ ವ್ಯಕ್ತಿಗಳ ಬ್ಯಾಂಕ್ ಖಾತೆಗೆ ಜನರಲ್ ಇನ್ಸೂರೆನ್ಸ್ ಕೌನ್ಸಿಲ್ ಇವರಿಂದ ನೇರವಾಗಿಪರಿಹಾರದಮೊತ್ತವನ್ನು15ದಿನದೊಳಗಾಗಿ ಸಂಬಂಧಪಟ್ಟವರಿಗೆ ಜಮೆಯಾಗುತ್ತದೆ.

ಈ ಮೇಲ್ಕಂಡ ಕಾರ್ಯವಿಧಾನವನ್ನು ಸಂಬಂಧಪಟ್ಟ ಇಲಾಖೆಯವರು ಕಾಲಮಿತಿಯಲ್ಲಿ ಕಡ್ಡಾಯವಾಗಿ ನಿರ್ವಹಿಸಬೇಕಾಗಿದ್ದು ಜನ ಸಾಮಾನ್ಯರಲ್ಲಿ ಈ ಕಾರ್ಯವಿಧಾನದ ಮಾಹಿತಿ ಕೊರತೆಯಿಂದ ಸರ್ಕಾರದ ಹಿತಚಿಂತಕ ಯೋಜನೆಯು ಪರಿಣಾಮಕಾರಿಯಾಗಿ ಅನುಷ್ಠಾನವಾಗುತ್ತಿಲ್ಲ. ಸರ್ಕಾರದ ಈ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಸಾರ್ವಜನಿಕರಲ್ಲಿ ಹೆಚ್ಚಿನ ಅರಿವು ಮತ್ತು ಪ್ರಚಾರವನ್ನು ಮೂಡಿಸುವುದು ಅವಶ್ಯಕವಾಗಿದ್ದು,

ಈ ಪರಿಹಾರ ಕಾರ್ಯವಿಧಾನವನ್ನು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ತಮ್ಮ ಕಚೇರಿಯಲ್ಲಿ ಹಾಗೂ ತಮ್ಮ ಕಾರ್ಯ ವ್ಯಾಪ್ತಿಯಲ್ಲಿರುವ ಎಲ್ಲಾ ಅಧೀನ ಕಚೇರಿಗಳಲ್ಲಿ ಕಡ್ಡಾಯವಾಗಿ

ಕಚೇರಿಯ ಆವರಣದಲ್ಲಿ ಸಾರ್ವಜನಿಕರಿಗೆ ಕಾಣುವ ಸ್ಥಳಗಳಲ್ಲಿ ಫಲಕಗಳನ್ನು ಅಳವಡಿಸುವ ಮೂಲಕ ವ್ಯಾಪಕ ಪ್ರಚಾರ ಅಥವಾ ಅರಿವು ಮೂಡಿಸಲು ಸೂಕ್ತ ಕ್ರಮ ಕೈಗೊಳ್ಳಬೇಕು. ಇದರಿಂದ ಸಾರ್ವಜನಿಕರಲ್ಲಿ ಅರಿವು ಮೂಡಿ ಮೃತರ ಕುಟುಂಬಗಳಿಗೆ ಹಾಗೂ ಅವಘಾತದಿಂದ ಭಾದಿತರಾಗುವ ವ್ಯಕ್ತಿಗಳಿಗೆ ಸರ್ಕಾರವು ನೀಡುವ ನೆರವು ಸಕಾಲದಲ್ಲಿ ದೊರಕಿಸುವಂತಾಗುತ್ತದೆ ಎಂದು ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ ಅವರು ಜಂಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೆಚ್ಚುವರಿ ಶುಲ್ಕ ರೂ. 8 ಲಕ್ಷ ವಾಪಸ್ ಗೆ ಜಿ.ಆರ್. ಮೆಡಿಕಲ್ ಕಾಲೇಜಿಗೆ ಆದೇಶ

**ಬೆಂಗಳೂರು :** 2022-23ನೇ ಸಾಲಿನಲ್ಲಿ ವೈದ್ಯ ವಿದ್ಯಾರ್ಥಿ ಆರ್.ಕೆ.ಆದಿತ್ಯ ಎಂಬುವರಿಂದ ಪ್ರವೇಶ ಸಂದರ್ಭದಲ್ಲಿ ನಿಗದಿಗಿಂತ ಹೆಚ್ಚುವರಿಯಾಗಿ 8 ಲಕ್ಷ ರೂಪಾಯಿ ವಸೂಲಿ ಮಾಡಿದ್ದನ್ನು ಹಿಂದುರುಗಿಸುವಂತೆ ಶುಲ್ಕ ನಿಯಂತ್ರಣ ಸಮಿತಿ ಅಧ್ಯಕ್ಷ ನ್ಯಾಯಮೂರ್ತಿ ಬಿ.ಶ್ರೀನಿವಾಸಗೌಡ ಅವರು ಮಂಗಳೂರಿನ ಜಿ.ಆರ್.ಮೆಡಿಕಲ್ ಕಾಲೇಜಿಗೆ ಸೂಚನೆ ನೀಡಿದ್ದಾರೆ.

ದೂರುದಾರ ಮತ್ತು ಕಾಲೇಜಿನ ಆಡಳಿತ ಮಂಡಳಿಯ ಸದಸ್ಯರನ್ನು ವಿಚಾರಣೆ ನಡೆಸಿ ಪ್ರಕರಣವನ್ನು ಇತ್ಯರ್ಥಪಡಿಸಿದ್ದು, ಹೆಚ್ಚುವರಿಯಾಗಿ ವಸೂಲಿ ಮಾಡಿದ್ದ 8 ಲಕ್ಷ ರೂಪಾಯಿ ಶುಲ್ಕ ಹಿಂದುರುಗಿಸಲು ಕಾಲೇಜು ಆಡಳಿತ ಮಂಡಲಿ ಒಪ್ಪಿದೆ ಎಂದು ಶ್ರೀನಿವಾಸ ಗೌಡ ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.



ಬಸವೇಶ್ವರ ಪೂರ್ವ ಪ್ರಾಥಮಿಕ ಪ್ರಾಥಮಿಕ ಹಾಗೂ ನ್ಯೂ ಹೈಸ್ಕೂಲ್ ಬಾಗಲಕೋಟೆ ಶಿಶುವಿಹಾರ ಶಾಲೆಯಲ್ಲಿ ಗುರುಕುಲ ಪದ್ದತಿಯನ್ನು ಶಿಕ್ಷಕರ ಪಾದಪೂಜೆ ಮಾಡುವ ಮೂಲಕ ಗುರು ಪೂರ್ಣಿಮೆಯನ್ನು ಆಚರಿಸಲಾಯಿತು.

# ಯಲಬುರ್ಗಾ ಗಣಿತಶಾಸ್ತ್ರದ ಸಹ ಪ್ರಾಧ್ಯಾಪಕಿ ನಂದಾಗೆ ಪಿಎಚ್‌ಡಿ



**ಕೊಪ್ಪಳ :** ಯಲಬುರ್ಗಾದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಗಣಿತಶಾಸ್ತ್ರದ ಸಹ ಪ್ರಾಧ್ಯಾಪಕಿ ನಂದಾ ಅವರಿಗೆ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯವು ಪಿಎಚ್.ಡಿ ಪದವಿ ನೀಡಿದೆ.

ವಿಜಯನಗರಶ್ರೀಕೃಷ್ಣದೇವರಾಯವಿಶ್ವವಿದ್ಯಾಲಯದ ಗಣಿತಶಾಸ್ತ್ರ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಅಶ್ವಿನ ಕುಮಾರ ಅವರ ಮಾರ್ಗದರ್ಶನದಲ್ಲಿ, ಯಲಬುರ್ಗಾದ ಗಣಿತಶಾಸ್ತ್ರದ ಸಹ ಪ್ರಾಧ್ಯಾಪಕಿ ನಂದಾ ಅವರು ಮಂಡಿಸಿದ "ಸಮ್ ಸ್ಟಡೀಸ್ ಆನ್ ಹೀಟ್ ಆ್ಯಂಡ್ ಮಾಸ್ ಟಾನ್ಸ್‌ಫರ್ ಕ್ಯಾರಕ್ಟರಿಸ್ಟಿಕ್ಸ್ ಆಫ್ ಮ್ಯಾಗ್ನೆಟೋಹೈಡ್ರೂಡೈನಮಿಕ್ ನಾನ್ ನ್ಯೂಟೋನಿಯನ್ ಫ್ಲೂಯಿಡ್ ಫ್ಲೂಸ್" ಎಂಬ ಮಹಾಪ್ರಬಂಧಕ್ಕೆ ಡಾಕ್ಟರೇಟ್ ಪದವಿಯನ್ನು ನೀಡಲಾಗಿರುತ್ತದೆ ಎಂದು ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರಕಟಣೆ ತಿಳಿಸಿದೆ.

# ಉದ್ಯಮ ಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮ: ಅರ್ಜಿ ಆಹ್ವಾನ

**ಕೊಪ್ಪಳ :** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಮತ್ತು ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ, ಬೆಂಗಳೂರು ಇವರ ಪ್ರಾಯೋಜಕತ್ವದಲ್ಲಿ, ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ, ಕೊಪ್ಪಳ ಇವರ ವತಿಯಿಂದ ಸ್ವಯಂ ಉದ್ಯೋಗ ಪ್ರಾರಂಭಿಸುವ ನಿರುದ್ಯೋಗ ಪರಿಶಿಷ್ಟ ಜಾತಿಯ ಯುವತಿಯ-ರಿಗೆ ಮತ್ತು ಉದ್ಯಮ ಆಕಾಂಕ್ಷಿಗಳಿಗೆ ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಿದ್ದು, ಆಸಕ್ತ-ರಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗದ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ, ಹಾಗೂ ಉದ್ಯಮ ನಿರ್ವಹಣೆ, ಉದ್ಯಮಶೀಲತೆ, ಉದ್ಯಮ ಪ್ರಾರಂಭದ ಹಂತಗಳು, ಉದ್ಯಮಗಳನ್ನು ಪ್ರಾರಂಭಿಸಲು ಸರ್ಕಾರದ ಯೋಜನೆಗಳು,

ಸಾಲ ಸೌಲಭ್ಯಗಳು, ಬ್ಯಾಂಕ್ ಬಗ್ಗೆ, ಜಾಹಿರಾತು ಮತ್ತು ಮಾರುಕಟ್ಟೆಯ ಕುರಿತು ನೋಂದಣೆ ಮಾಡುವ ವಿಧಾನಗಳು, ಯಶಸ್ವಿ ಉದ್ಯಮಿಗಳ ಜೊತೆ ಸಂವಾದ, ಉದ್ಯಮ ನಿರ್ವಹಣೆ ಮಾಡುವ ವಿಧಾನಗಳು ಮತ್ತು ಇತ್ಯಾದಿ ವಿಷಯಗಳ ಕುರಿತು ತರಬೇತಿಯನ್ನು ನೀಡಲಾಗುವುದು. ಇದಕ್ಕಾಗಿ ಕೊಪ್ಪಳ ಜಿಲ್ಲೆಯ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು 18 ರಿಂದ 45 ವರ್ಷ ವಯಸ್ಸಿನವರಾಗಿರಬೇಕು, ಎಸ್.ಎಸ್.ಎಲ್.ಸಿ. ಆಗಿರಬೇಕು.

ಆಸಕ್ತರು ಕೊಪ್ಪಳ ನಗರಸಭೆ ಎದುರುಗಡೆ ಇರುವ ಜಿಲ್ಲಾ ಕೈಗಾರಿಕಾ ಕೇಂದ್ರ, ಸಿಡಾಕ್ ಜಂಟಿ ನಿರ್ದೇಶಕರ ಕಛೇರಿಗೆ ಆಧಾರ ಕಾರ್ಡ್, ಜಾತಿ ಪ್ರಮಾಣ ಪತ್ರ, ರೇಶನ್ ಕಾರ್ಡ್‌ಗಳ ಝರಾಕ್ಸ್ ಪ್ರತಿಗಳು ಹಾಗೂ 2 ಪಾಸಪೋರ್ಟ್ ಸೈಜ್ ಫೋಟೋಗಳೊಂದಿಗೆ ಜುಲೈ 16ರ ರೊಳಗೆ ಅರ್ಜಿಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 6362557332 ಅಥವಾ 7204016012 ಗೆ ಸಂಪರ್ಕಿಸಬಹುದು ಎಂದು ಕೊಪ್ಪಳ ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಷತ್ ಸದಸ್ಯ ರವಿಕುಮಾರ್ ಹೇಳಿಕೆಗೆ ಖಂಡನೆ



**ಕೊಪ್ಪಳ :** ರಾಜ್ಯದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ವಿರುದ್ಧ ವಿಧಾನ ಪರಿಷತ್ನ ಬಿಜೆಪಿ ಸದಸ್ಯ ಎನ್.ರವಿಕುಮಾರ್‌ನಾಲಿಗೆಹರಿಬಿಟ್ಟುತನ್ನೊಳಗಿನ ಕೊಳಕು ಮನಸ್ಥಿತಿ ಹೊರಹಾಕಿದ್ದಾರೆಎಂದು ವೆಲ್ಫೇರ್ ಪಾರ್ಟಿ ಆಫ್‌ಇಂಡಿಯಾ ಮಹಿಳಾ ಘಟಕರಾಜ್ಯಅಧ್ಯಕ್ಷೆ ಸಬಿಹಾ ಪಟೇಲ್ ಟೀಕಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವಅವರು, ಮಹಿಳೆಯರ ಬಗ್ಗೆ ಕಿಂಚಿತ್ತೂಗೌರವಕೊಡದರವಿಕುಮಾರ್ ಪರಿಷತ್ ಸದಸ್ಯ ಸ್ಥಾನಕ್ಕೆ ರಾಜೀನಾಮೆಕೊಟ್ಟುನಾಡಿನಮಹಿಳೆಯರಲ್ಲಿಕ್ಷಮೆಯಾಚಿಸಬೇಕುಎಂದು ಒತ್ತಾಯಿಸಿದ್ದಾರೆ.ರಾಜ್ಯ ಬಿಜೆಪಿ ನಾಯಕರಿಂದ ಮಹಿಳೆಯರ ನಿಂದನೆ ನಿರಂತರ ವಾಗಿ ನಡೆಯುತ್ತಿದೆ. ಹಿರಿಯ ಮಹಿಳಾ ಐಎಎಸ್‌ಅಧಿಕಾರಿ ಬಗ್ಗೆ ಕೆಟ್ಟದಾಗಿ ಮಾತನಾಡಿರುವರವಿಕುಮಾರ್‌ಅವರುಇಡೀ ಮಹಿಳಾ ಕುಲಕ್ಕೆ ಅವಮಾನ ಮಾಡಿದ್ದಾರೆಎಂದು ಆರೋಪಿಸಿದರು.

# ಶೂ ಮತ್ತು ಸಾಕ್ಸ್ ವಿತರಣೆಯಲ್ಲಿ ಸರಕಾರಿ ನಿಯಮ, ಪಾರದರ್ಶಕತೆ ಪಾಲನೆ ಕಡ್ಡಾಯ; ಸಾರ್ವಜನಿಕವಾಗಿ ದೂರು ಬಂದಲ್ಲಿ ಸೂಕ್ತಕ್ರಮ; ಜಿಲ್ಲಾಧಿಕಾರಿ ದಿವ್ಯ ಪ್ರಭು


**ಧಾರವಾಡ:** ಸರಕಾರಿ ಶಾಲೆಗಳಲ್ಲಿ 1 ರಿಂದ 10 ನೇ ತರಗತಿವರೆಗೆ ವ್ಯಾಸಾಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 2025-26 ನೇ ಸಾಲಿಗೆ ಒಂದು ಜೊತೆ ಶೂ ಮತ್ತು ಎರಡು ಜೊತೆ ಸಾಕ್ಸ್ ವಿತರಿಸಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಆದೇಶಿಸಿದ್ದು, ಜೂ.21 ರ ಸರಕಾರಿ ಆದೇಶದಲ್ಲಿ ತಿಳಿಸಿರುವ ಷರತ್ತು ಮತ್ತು ನಿಬಂಧನೆಗಳನ್ನು ಕಡ್ಡಾಯವಾಗಿ ಪಾಲಿಸಿ, ಪಾರದರ್ಶಕವಾಗಿ ಖರೀದಿಸಬೇಕು. ಈ ನಿಟ್ಟಿನಲ್ಲಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗೆ ಸರಿಯಾದ ಮಾಹಿತಿ, ಸಮನ್ವಯ ಮಾಡಿ, ಸರಕಾರಿ ನಿಯಮ ಪಾಲನೆಯಲ್ಲಿ ಲೋಪವಾಗದಂತೆ ಇಲಾಖೆ ಅಧಿಕಾರಿಗಳು ಮುನ್ನೆಚ್ಚರಿಕೆವಹಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವಿವಿಧ ಹಂತದ ಅಧಿಕಾರಿಗಳ ಸಭೆ ಜರುಗಿಸಿ, ಮಾತನಾಡಿದರು.

ಸರಕಾರದ ಸೌಲಭ್ಯಗಳು ವಿದ್ಯಾರ್ಥಿಗಳಿಗೆ ಸರಿಯಾಗಿ ತಲುಪಬೇಕು. ಸರಕಾರಿ ಶಾಲಾ ಮಕ್ಕಳಿಗೆ ಉಚಿತವಾಗಿ ನೀಡುವ ಸಮವಸ್ತ್ರ, ಪಠ್ಯಪುಸ್ತಕ ಮತ್ತು ಶೂ, ಸಾಕ್ಸ್ ಗುಣಮಟ್ಟದ್ದಾಗಿರಬೇಕು. ಒಂದು ಜೊತೆ ಶೂ ಮತ್ತು ಎರಡು ಜೊತೆ ಸಾಕ್ಸ್ ಖರೀದಿಗೆ ಅನುದಾನವನ್ನು ಎಸ್.ಡಿ.ಎಂ.ಸಿ ಖಾತೆಗೆ ನೇರವಾಗಿ ಜಮೆ ಆಗುತ್ತದೆ. ಇವುಗಳ ಖರೀದಿಗೆ ಅನುಸರಿಸುವ ಮಾರ್ಗಸೂಚಿ ಹಾಗೂ ಷರತ್ತು, ನಿಬಂಧನೆಗಳನ್ನು ಈಗಾಗಲೇ ಎಲ್ಲ ಶಾಲೆಗಳ ಮುಖ್ಯಸ್ಥರಿಗೆ ಕಳುಹಿಸಲಾಗಿದೆ. ಸಮಿತಿ ಸದಸ್ಯರಿಗೆ ಸುತ್ತೋಲೆ ಮಾಹಿತಿ, ಸೂಕ್ತ ತಿಳುವಳಿಕೆ ನೀಡಿ, ಪಾರದರ್ಶಕತೆ ಅನುಸರಿಸಬೇಕು ಎಂದು ಅವರು ಹೇಳಿದರು.

ಶೂ, ಸಾಕ್ಸ್‌ಗಳ ಗುಣಮಟ್ಟ ಮತ್ತು ಇಲಾಖೆ ಸೂಚಿಸಿರುವ ಸ್ಪೇಷಿಫಿಕೇಶನ್ ಇರಬೇಕು. ಶೂ, ಸಾಕ್ಸ್‌ಗಳ ಗುಣಮಟ್ಟ ಇಲ್ಲ, ಕಳಪೆ ಆಗಿವೆ ಇತ್ಯಾದಿ ಸಾರ್ವಜನಿಕರಿಂದ, ವಿದ್ಯಾರ್ಥಿಗಳಿಂದ ದೂರುಗಳು ಬಂದಲ್ಲಿ ಪರಿಶೀಲಿಸಿ, ಸೂಕ್ತ ಕಾನೂನು ಕ್ರಮ ಕೈಗೊಂಡು, ಸಂಬಂಧಿಸಿದವರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಜಿಲ್ಲಾಧಿಕಾರಿಗಳು ಎಚ್ಚರಿಸಿದರು.

ಪಠ್ಯಪುಸ್ತಕ, ಸಮವಸ್ತ್ರ ವಿತರಿಸಿದ ವರದಿ ಸಲ್ಲಿಸಿ: ಈಗಾಲೇ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ, ಸಮವಸ್ತ್ರ ವಿತರಿಸಿದ ಬಗ್ಗೆ ಎಲ್ಲ ಬಿಇಓ ಅವರು ಕೂಡಲೆ ವರದಿ ಸಲ್ಲಿಸಬೇಕು. ಕೆಲವು ಶಾಲೆಗಳಲ್ಲಿ ಸರಿಯಾಗಿ ಸಮವಸ್ತ್ರ ವಿತರಿಸದರ ಬಗ್ಗೆ ದೂರುಗಳಿವೆ. ಈ ಶನಿವಾರದೊಳಗೆ ಎಲ್ಲ ವಿದ್ಯಾರ್ಥಿಗಳಿಗೂ ಎರಡು ಜೊತೆ ಸಮವಸ್ತ್ರದ ಬಟ್ಟೆ, ಪಠ್ಯಪುಸ್ತಕ



ವಿತರಿಸಿ, ಅದರ ಬಗ್ಗೆ ವರದಿ ಸಲ್ಲಿಸಲು ಅವರು ಸೂಚಿಸಿದರು.

ಶಾಲಾ ಹಾಜರಾತಿ ಹೆಚ್ಚಿಸಲು ಸಮುದಾಯಗಳೊಂದಿಗೆ ಸಭೆ: ಪ್ರಸಕ್ತ ಸಾಲಿನ ಜೂನ ತಿಂಗಳ ಅಂತ್ಯದವರೆಗೆ ಜಿಲ್ಲೆಯಲ್ಲಿ 1 ರಿಂದ 10 ನೇ ತರಗತಿವರೆಗೆ ಒಟ್ಟು 3,39,109 ವಿದ್ಯಾರ್ಥಿಗಳು ನೋಂದಣಿ ಆಗಿದ್ದಾರೆ. ಇದರಲ್ಲಿ 33,588. ಸಾಮಾನ್ಯ, 35,861 ಪರಿಶಿಷ್ಟ ಜಾತಿ, 17,977 ಪರಿಶಿಷ್ಟ ಪಂಗಡ, 2,51,583 ಹಿಂದುಳಿದ ವರ್ಗ ಹಾಗೂ 89,963 ಅಲ್ಪಸಂಖ್ಯಾತ ವಿದ್ಯಾರ್ಥಿಗಳು ನೋಂದಣಿ ಆಗಿದ್ದಾರೆ.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಮತ್ತು ಅಲ್ಪಸಂಖ್ಯಾತ ಸಮುದಾಯಗಳೊಂದಿಗೆ ಸಂಬಂಧಿಸಿದಇಲಾಖೆಗಳಸಹಯೋಗದಲ್ಲಿ ಸಭೆ ಜರುಗಿಸಿ, ಮಕ್ಕಳ ಶಾಲಾ ಹಾಜರಾತಿ ಹೆಚ್ಚಳಕ್ಕೆ ಮತ್ತು ಪರಿಣಾಮಕಾರಿಯಾಗಿ ಶೈಕ್ಷಣಿಕ ಚಟುವಟಿಕೆಗಳನ್ನು ಕೈಗೊಳ್ಳಲು ಸಮುದಾಯಗಳ ಸಹಕಾರ ಕೋರುತ್ತೇವೆ. ಈ ಕುರಿತು ಚರ್ಚಿಸಲು ವಿವಿಧ ಸಮುದಾಯಗಳೊಂದಿಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಪ್ರತ್ಯೇಕ ಸಭೆ ಅಯೋಜಿಸಲಿದೆ ಎಂದು ಅವರು ಸಭೆಯಲ್ಲಿ ತಿಳಿಸಿದರು.

ಇಲಾಖೆ ಸುತ್ತೋಲೆ, ಆದೇಶಗಳ ಪಾಲನೆಗೆ ಅನುಪಾಲನಾ ವರದಿ ನೀಡಿ: ಶೈಕ್ಷಣಿಕ ಸುಧಾರಣೆಗಾಗಿ ಇಲಾಖೆಯಿಂದ ಅನೇಕ ಹಂತದಲ್ಲಿ ಪರಿಣಾಮಕಾರಿ ಕ್ರಮಗಳನ್ನು ಶಿಕ್ಷಣ ಇಲಾಖೆಯಿಂದ ಕೈಗೊಳ್ಳಲಾಗುತ್ತಿದೆ. ಪ್ರಧಾನ ಕಾರ್ಯದರ್ಶಿಗಳು ಶಿಕ್ಷಕರ ಹಾಜರಾತಿ, ಮಕ್ಕಳ ಹಾಜರಾತಿ, ಶಾಲಾ ಅವಧಿಯಲ್ಲಿ ಶಿಕ್ಷಕರು ಹೊರಹೋಗದಂತೆ ನಿರ್ಭಂದಿಸಿ, ಆದೇಶ, ಸುತ್ತೋಲೆಗಳನ್ನು ಹೊರಡಿಸಿದ್ದಾರೆ. ಕಟ್ಟುನಿಟ್ಟಾಗಿ ಇವುಗಳ ಪಾಲನೆ ಆಗಬೇಕು.

ಬಿಇಓ, ಡಿಡಿಪಿಐ ಅವರು ಶಾಲೆಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಿ, ಖಚಿತ ಪಡಿಸಿಕೊಳ್ಳಬೇಕೆಂದು ಮತ್ತು ಡಿಡಿಪಿಐ ಅವರು ಈ ಕುರಿತು ಜಿಲ್ಲಾಡಳಿತಕ್ಕೆ ಅನುಪಾಲನಾ ವರದಿ ಸಲ್ಲಿಸಬೇಕೆಂದು ಅವರು ನಿರ್ದೇಶಿಸಿದರು.

ಹೈಸ್ಕೂಲ್ ಶಿಕ್ಷಕರ ಬಿಎಲ್‌ಓ ಕರ್ತವ್ಯ ವಿನಾಯಿತಿ: ಮಿಷನ್ ವಿದ್ಯಾಕಾಶಿ ಯೋಜನೆಯ ಪರಿಣಾಮಕಾರಿ ಅನುಷ್ಠಾನ ಮತ್ತು ಜಿಲ್ಲೆಯ ಶೈಕ್ಷಣಿಕ ಸುಧಾರಣೆಗಾಗಿ ಜಿಲ್ಲಾಡಳಿತ ವಿವಿಧ ಕ್ರಮಗಳನ್ನು ಕೈಗೊಳ್ಳುತ್ತಿದೆ. ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರು ಶಾಲಾ ಅವಧಿಯಲ್ಲಿ ಶಾಲೆಯಲ್ಲಿ ಇದ್ದು, ವಿದ್ಯಾರ್ಥಿಗಳ ಕಲಿಕೆಯ ಬಗ್ಗೆ ಆಸಕ್ತಿ, ಕಾಳಜಿವಹಿಸುವುದು ಅತೀ ಜರೂರ ಇದೆ. ಆದ್ದರಿಂದ ಜಿಲ್ಲೆಯ ವಿವಿಧ ಕ್ಷೇತ್ರಶಿಕ್ಷಣಾಧಿಕಾರಿಗಳ ವ್ಯಾಪ್ತಿಯಲ್ಲಿ ಹೊಸದಾಗಿ ಪ್ರೌಢಾಲಾ ಶಿಕ್ಷಕರನ್ನು ಬಿಎಲ್‌ಓ ಆಗಿ ನಿಯೋಜಿಸಲಾಗುತ್ತಿದ್ದನ್ನು ನಿಲ್ಲಿಸಲಾಗಿದೆ.

ಈಗಾಗಲೇ ಆದೇಶವಾಗಿದ್ದರೆ ಅದನ್ನು ರದ್ದುಪಡಿಸಿ, ಅವರಿಗೆ ಶಾಲೆಯಲ್ಲಿ ಹೆಚ್ಚುವರಿ ಪಾಠ ಮಾಡಲು ಅನುಕೂಲ ಮಾಡಲಾಗುತ್ತದೆ. ಶಿಕ್ಷಕರಿಗೆ ಹೆಚ್ಚುವರಿ ಕೆಲಸ ಜವಾಬ್ದಾರಿಯನ್ನುಹಂತಹಂತವಾಗಿಕಡಿಮೆ ಮಾಡಲಾಗುತ್ತಿದೆ. ಶಿಕ್ಷಕರು ಪ್ರಾಮಾಣಿಕತೆ ಮತ್ತು ಹೆಚ್ಚು ಕಾಳಜಿಯಿಂದ ತಮ್ಮನ್ನು ತಾವು ಶೈಕ್ಷಣಿಕ ಕಾರ್ಯಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಪ್ರತಿ ಶಾಲೆಗೆ ಬೈಯೋಮೆಟ್ರಿಕ್, ಫೇಸ್ ರೆಕಗ್ನೈಜೆಷನ್ ಮಷಿನ್ ಅಳವಡಿಕೆ: ಪ್ರತಿ ಶಾಲೆಗಳಲ್ಲಿ ನಿಯಮಿತ ಸಮಯಕ್ಕೆ ಶಿಕ್ಷಕರು ಹಾಜರಿದ್ದು, ಶಾಲಾ ಅವಧಿ ನಂತರ ತೆರಳುವದನ್ನು ಖಾತರಿ ಮಾಡಿಕೊಳ್ಳಲು ಬಯೋಮೆಟ್ರಿಕ್ ಮತ್ತು ಫೇಸ್ ರೆಕಗ್ನೈಜೆಷನ್ (Face Recognition) ಇರುವ ಮಷಿನ್ ಅಳವಡಿಸಲು ಚಿಂತಿಸಲಾಗುತ್ತಿದೆ. ಮಷಿನ್ ಅಳವಡಿಕೆ ನಂತರ ಎಲ್ಲ ಶಿಕ್ಷಕರು, ಸಿಬ್ಬಂದಿಗಳು ನಿಗಧಿತ ಸಮಯಕ್ಕೆ ಹಾಜರಿದ್ದು ಬೆಳಿಗ್ಗೆ, ಮಧ್ಯಾಹ್ನ ಮತ್ತು ಸಂಜೆ ಮೂರು ಅವಧಿಯಲ್ಲಿ ಹಾಜರಾತಿ ದಾಖಲಿಸಿ, ಅದನ್ನು ಹೆಚ್.ಆರ್.ಎಮ್.ಎಸ್. ದೊಂದಿಗೆ ಲಿಂಕ್ ಮಾಡಿ, ಹಾಜರಾತಿ ತಕ್ಕಂತೆ ವೇತನ ಆವತಿ ಆಗುವ ಸೌಲಭ್ಯ ಮಾಡಲಾಗುತ್ತಿದೆ. ಇದಕ್ಕೆ ಎಲ್ಲರೂ ಸಹಕಾರ ನೀಡಿ, ಪಾಲಿಸಬೇಕು ಎಂದರು.

ಜಿಲ್ಲಾ ಪಂಚಾಯತ ಸಿಇಓ ಭುವನೇಶ ಪಾಟೀಲ ಅವರು ಮಾತನಾಡಿ, ಶೈಕ್ಷಣಿಕ ಸುಧಾರಣೆಗೆ ಸಮುದಾಯದ ಪಾಲ್ಗೊಳ್ಳುವಿಕೆ ಮುಖ್ಯವಾಗಿದೆ. ಮುಂದಿನ ದಿನಗಳಲ್ಲಿ ಪ್ರತಿ ತಾಲೂಕಿನಲ್ಲಿ ಎಲ್ಲ ಶಾಲೆಗಳ ಎಸ್.ಡಿ.ಎಂ.ಸಿ ಅಧ್ಯಕ್ಷರ, ಸದಸ್ಯರ, ಪಾಲಕರ ಸಮಿತಿ ಅಧ್ಯಕ್ಷರ ಹಾಗೂ ಇಲಾಖೆ ಅಧಿಕಾರಿಗಳಸಭೆಆಯೋಜಿಸಲಾಗುವುದು. ಬಿಇಓ, ಡಿಡಿಪಿಐ ಅವರು ಕಚೇರಿಯಲ್ಲಿ ಕಾಲ ಕಳೆಯದೆ ಶಾಲಾಗಳಿಗೆ ನಿರಂತರವಾಗಿ ಭೇಟಿ ನೀಡಿ, ಪರಿಶೀಲಿಸಬೇಕು. ಶಿಕ್ಷಕರ, ವಿದ್ಯಾರ್ಥಿಗಳ ಬಗ್ಗೆ ಗಮನಹರಿಸಬೇಕು ಎಂದು ಹೇಳಿದರು.

ಸಮುದಾಯದ ಸಭೆಗಳಲ್ಲಿ ಸರಕಾರದ ವಿವಿಧ ಯೋಜನಗಳ ಕುರಿತು ಇಲಾಖೆ ಅಧಿಕಾರಿಗಳು ಜಾಗೃತಿ, ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಬೇಕೆಂದು ಅವರು ಹೇಳಿದರು.

ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್.ಕೆಳದಿಮಠ ಸೇರಿದಂತೆ ಡಿಡಿಪಿಐ ಕಚೇರಿಯ ವಿವಿಧ ಅಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿಆರ್.ಪಿ ಗಳು, ಸಿಆರ್.ಪಿ ಗಳು, ಶಿಕ್ಷಣ ನಿರೀಕ್ಷಕರು ಹಾಗೂ ಶಾಲಾ ಶಿಕ್ಷಣ ಇಲಾಖೆ ಇತರರು ಇದ್ದರು.

# ಪತ್ರಕರ್ತರಿಗೆ ಅಧ್ಯಯನ ಶಿಬಿರ: ಅರ್ಜಿ ಆಹ್ವಾನ

**ಬೆಳಗಾವಿ:** ಕರ್ನಾಟಕಸಾಹಿತ್ಯಅಕಾಡೆಮಿಯು ಪತ್ರಕರ್ತರಿಗೆ ಕನ್ನಡ ಸಾಹಿತ್ಯ ಎಂಬ ಹೆಸ-ರಿನಲ್ಲಿ 3 ದಿನಗಳ ಅಧ್ಯಯನ ಶಿಬಿರವನ್ನು ಆಗಸ್ಟ್ 3ನೇ ವಾರ ಅಥವಾ ಕೊನೆಯ ವಾರದಲ್ಲಿ ನಡೆಸಲಾಗುತ್ತಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಿದೆ.

20 ರಿಂದ 40 ವರ್ಷ ವಯೋಮಾನದ ಈಗಾಗಲೇ ಪತ್ರಿಕೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ, ಪತ್ರಿಕೋದ್ಯಮ ಪದವಿ ಪಡೆದವರು ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 25-07-2025 ಆಗಿದೆ. ಆಸಕ್ತರು, ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ https://sahithyaacademy.karnataka.gov.in ಮೂಲಕ ವಿವರ ಪಡೆದುಕೊಳ್ಳಬಹುದಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ ಕರಿಯಪ್ಪ ಎನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊರರಾಜ್ಯದ ಉದ್ಯೋಗಿಗಳ ಕನ್ನಡ ಕಲಿಕೆಗಾಗಿ ಧಾರವಾಡದಲ್ಲಿ ಕನ್ನಡ ಕಲಿಕಾ ಕೇಂದ್ರ ಆರಂಭಿಸಲು ಕನ್ನಡ ಅಭಿವೃದ್ಧಿ ಪ್ರಾಧಿಕಾರ ಸಿದ್ಧವಿದೆ: ಡಾ. ಪುರುಷೋತ್ತಮ ಬಿಳಿಮಲೆ




**ಧಾರವಾಡ :** ಕನ್ನಡಕ್ಕಾಗಿ ಹೋರಾಟ ನಡೆಸಿದವರ ಮೇಲೆ ಪೊಲೀಸ್ ಪ್ರಕರಣಗಳು ದಾಖಲಾಗಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ನೀಡಲಾಗುವುದು.

ಪೊಲೀಸ್ ಮತ್ತು ಜಿಲ್ಲಾಡಳಿತ ಈ ಕುರಿತು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ವರದಿ ಸಲ್ಲಿಸಬೇಕೆಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಅವರು ಹೇಳಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಗಂಣದಲ್ಲಿ ಕನ್ನಡ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ, ಮಾತನಾಡಿದರು.

ಗೋಕಾಕ ಚಳುವಳಿಯ ಸ್ಮರಣೆಗಾಗಿ ಹುಬ್ಬಳ್ಳಿಯ ಗಬ್ಬೂರ ಬೈಪಾಸ್ ಹತ್ತಿರ ಇರುವ ಸರ್ಕಲ್‌ನಲ್ಲಿ ಡಾ. ರಾಜಕುಮಾರ ಅವರ ಸ್ಮಾರಕವನ್ನು ನಿರ್ಮಿಸಬೇಕು ಎಂಬುದು ಕನ್ನಡಪರ ಹೋರಾಟಗಾರರ ಬೇಡಿಕೆಯಾಗಿದೆ. ಈ ಕುರಿತು ಸರ್ಕಾರಕ್ಕೆ ನಿಯಮಾನುಸಾರಪ್ರಸ್ತಾವನೆಯನ್ನುಸಲ್ಲಿಸಲಾಗುತ್ತದೆ ಎಂದು ಹೇಳಿದರು.

ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಕನ್ನಡ ಉದ್ಯೋಗಿಗಳ ಸಂಖ್ಯೆ ಕಡಿಮೆ ಇರುವದರಿಂದ ಗ್ರಾಹಕರಿಗೆ ಭಾಷೆ ಸಮಸ್ಯೆ ಉಂಟಾಗುತ್ತಿದೆ. ಕೇಂದ್ರ ಸರ್ಕಾರ ಸ್ಥಳೀಯ ಶಾಖೆಗಳಲ್ಲಿ ಕರ್ತವ್ಯ ನಿರ್ವಹಿಸುವ ಬ್ಯಾಂಕ್ ಉದ್ಯೋಗಿಗಳಿಗೆ ಸ್ಥಳೀಯ ಭಾಷೆ, ವಿಶೇಷವಾಗಿ ಕನ್ನಡ ಕಲಿಕೆಯನ್ನು ಕಡ್ಡಾಯಗೊಳಿಸಿದೆ. ರಾಜ್ಯ ಸರ್ಕಾರ ಮತ್ತು ಕನ್ನಡ ಅಭಿವೃದ್ಧಿ ಪ್ರಾಧಿಕಾರ ಈ ಹಿನ್ನಲೆಯಲ್ಲಿ ಅನೇಕ ಕ್ರಮಗಳನ್ನು ಕೈಗೊಂಡಿದೆ. ಬ್ಯಾಂಕ್ ಉದ್ಯೋಗಿಗಳಿಗೆ ಸ್ಥಳೀಯ ಭಾಷೆ, ಕನ್ನಡ ಕಲಿಯಲು ಕ್ರಮವಹಿಸಿದೆ. ರಾಜ್ಯದ ಎರಡು ಪ್ರಮುಖ ಕೇಂದ್ರಗಳಾಗಿರುವ ಧಾರವಾಡ ಮತ್ತು ಮೈಸೂರು ಭಾಗದಲ್ಲಿ ಕನ್ನಡ ಭಾಷೆಗೆ ಹಿನ್ನಡೆ, ಕುಸಿತವಾದರೆ, ಕರ್ನಾಟಕದಲ್ಲಿ ಕನ್ನಡ ಭಾಷೆಗೆ ತೊಂದರೆ ಆಗುತ್ತದೆ ಎಂದು ಅವರು ಹೇಳಿದರು.

ಧಾರವಾಡ ಜಿಲ್ಲೆಯಲ್ಲಿ ಕಳೆದ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಕನ್ನಡದಲ್ಲಿ ಅನುತ್ತೀರ್ಣ ಆಗಿರುವ ವಿದ್ಯಾರ್ಥಿಗಳ ಸಂಖ್ಯೆಯನ್ನು ತಾಲೂಕುವಾರು ಪಡೆದು, ಇದಕ್ಕೆ ಕಾರಣವಾಗಿರುವ ಅಂಶಗಳನ್ನು ವಿಶ್ಲೇಷಿಸಿ, ಶಿಕ್ಷಣ ಇಲಾಖೆಯು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಮಾಹಿತಿ ಸಲ್ಲಿಸಬೇಕು. ಪ್ರಾಧಿಕಾರವು ಈ ಕುರಿತು ಪರಿಶೀಲಿಸಿ, ಕನ್ನಡ ವಿಷಯದಲ್ಲಿ ಫಲಿತಾಂಶ ಕಡಿಮೆ ಆಗಲು ಕಾರಣ, ಪಠ್ಯಪುಸ್ತಕದ ವಿಷಯ, ಅಧ್ಯಾಪಕರು ಪಾಠದ ಕ್ರಮದ ಬಗ್ಗೆ ವಿಮರ್ಶಿಸಿ, ಸರ್ಕಾರಕ್ಕೆ ಸವಿವರವಾದ ವರದಿ ನೀಡುತ್ತೇವೆ ಎಂದು ಹೇಳಿದರು.

ಕರ್ನಾಟಕ ಸರ್ಕಾರದ ಆದೇಶದ ಪ್ರಕಾರ ಎಲ್ಲ ನಾಮಫಲಕಗಳಲ್ಲಿ ಶೇ. 60 ರಷ್ಟು ಕನ್ನಡ ಇರಬೇಕು. ಆದರೆ ಅವಳಿನಗರದಲ್ಲಿ ನೋಡಿದಾಗ ಸರ್ಕಾರದ ಈ ನಿಯಮ ಸರಿಯಾಗಿ ಪಾಲನೆಯಾಗಿಲ್ಲ ಎಂಬುವುದು ಕಂಡುಬರುತ್ತಿದೆ. ಜಿಲ್ಲಾಡಳಿತ ಮತ್ತು ಮಹಾನಗರ ಪಾಲಿಕೆಯು ಈ ಕುರಿತು ಕ್ರಮವಹಿಸಿ, ಎಲ್ಲ ಪ್ರಕಾರದ ಅಂಗಡಿ, ಮುಗ್ಗಟ್ಟುಗಳ ಹಾಗೂ ಇತರ ನಾಮಫಲಕಗಳಲ್ಲಿ ಶೇ. 60 ರಷ್ಟು ಕನ್ನಡ ಅಕ್ಷರಗಳು ಇರುವಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಹುಬ್ಬಳ್ಳಿ ಮತ್ತು ಬೆಳಗಾವಿ ವಿಮಾನ ನಿಲ್ದಾಣಗಳಿಗೆ ಸ್ಥಳೀಯ ಮಹನೀಯರ ಹೆಸರುಗಳನ್ನು ಇಡಬೇಕು ಎಂದು ಬೇಡಿಕೆ ಬಂದಿದೆ. ಸ್ಥಳೀಯರ ಹೆಸರುಗಳನ್ನು ಪಟ್ಟಿಮಾಡಿ ಪ್ರಾಧಿಕಾರದಿಂದ ಹಾಗೂ ಜಿಲ್ಲಾಡಳಿತ ಸೇರಿ ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಲಾಗುವುದು ಎಂದು ಹೇಳಿದರು.

ಜಿಲ್ಲೆಯ ಬ್ಯಾಂಕ್, ಅಂಚೆ ಕಚೇರಿ, ಕೈಗಾರಿಕೆ ಪ್ರದೇಶಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೇರೆ ರಾಜ್ಯಗಳ ಉದ್ಯೋಗಿಗಳು ಕನ್ನಡ ಕಲಿಯಬೇಕು. ಅವರ ಆಸಕ್ತಿಗೆ ಅನುಗುಣವಾಗಿ ಕನ್ನಡ ಕಲಿಕಾ ಕೇಂದ್ರಗಳನ್ನು ಆರಂಭಿಸಲಾಗುತ್ತದೆ. ಅಲ್ಪಾವಧಿಯ ಕನ್ನಡ ಕಲಿಕೆಗಾಗಿ ಮೂರು ತಿಂಗಳಿಗೊಂದು ತರಬೇತಿ ಕಾರ್ಯಕ್ರಮ ನಡೆಸಲಾಗುತ್ತದೆ. ತರಬೇತಿ ಅವಧಿಯಲ್ಲಿ ದಿನಕ್ಕೆ ಒಂದು ಗಂಟೆಯಂತೆ ವಾರಕ್ಕೆ ಮೂರು ಗಂಟೆ ಮತ್ತು ತಿಂಗಳಿಗೆ 12 ಗಂಟೆ ಹೀಗೆ ಮೂರು ತಿಂಗಳಿಗೆ ಮೂವತ್ತಾರು ಗಂಟೆಗಳ ಅವಧಿಯ ತರಬೇತಿ ನೀಡಲಾಗುತ್ತದೆ.

ತರಬೇತಿ ಅವಧಿಯ ಮೂರು ತಿಂಗಳಲ್ಲಿ ಉದ್ಯೋಗಿಗೆ ಕನ್ನಡ ಮಾತನಾಡಲು, ಸಂವಹನ ಮಾಡಲು, ದಿನನಿತ್ಯದ ಸಂವಹನಕ್ಕೆ ಅಗತ್ಯವಿರುವ ಸಾಮಾನ್ಯ ಕನ್ನಡವನ್ನು ಹೇಳಿಕೊಡಲಾಗುತ್ತದೆ ಎಂದು ಹೇಳಿದರು.

ಅಗತ್ಯವಿದ್ದಲ್ಲಿ ಧಾರವಾಡ ಜಿಲ್ಲೆಯಲ್ಲಿ ಕನ್ನಡ ಕಲಿಕಾ ಕೇಂದ್ರವನ್ನು ಪ್ರಾಧಿಕಾರದಿಂದ ತೆರೆಯಲಾಗುತ್ತದೆ. ಇದರ ಸಂಪೂರ್ಣ ವೆಚ್ಚವನ್ನು ಕನ್ನಡ ಪ್ರಾಧಿಕಾರದಿಂದಲೇಭರಿಸಲಾಗುವುದುಎಂದುಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರು???ತ್ತಮ ಬಿಳಿಮಲೆ ಅವರು ಹೇಳಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ಜಿಲ್ಲೆಯಲ್ಲಿ ಕನ್ನಡ ಭಾಷೆಯ ಅನುಷ್ಠಾನಕ್ಕೆ ಅಗತ್ಯ ಕ್ರಮವಹಿಸಲಾಗಿದೆ.

ಮಹಾನಗರ ಪಾಲಿಕೆಯಿಂದ ವಾಣಿಜ್ಯ ಮಳಿಗೆಗಳಿಗೆ ಪರವಾನಿಗೆ ಪತ್ರ ನೀಡುವ ಸಂದರ್ಭದಲ್ಲಿ ಕಡ್ಡಾಯವಾಗಿ ಕನ್ನಡ ಬಳಸಲು ಮತ್ತು ತಮ್ಮ ಅಂಗಡಿಯ ನಾಮಫಲಕಗಳಲ್ಲಿ ಶೇ. 60 ಕ್ಕಿಂತ ಹೆಚ್ಚು ಸ್ಥಳದಲ್ಲಿ ಕನ್ನಡ ಬಳಸಲು ಸೂಚಿಸಲಾಗುತ್ತದೆ. ಈ ಕುರಿತು ಪರಿಶೀಲಿಸಿ, ಸೂಕ್ತ ಕ್ರಮಕೈಗೊಳ್ಳಲು ಮಹಾನಗರ ಪಾಲಿಕೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಗೆ ಈಗಾಗಲೇ ನಿರ್ದೇಶನ ನೀಡಲಾಗಿದೆ. ಮುಂದಿನ ತಿಂಗಳು

ಈಕುರಿತುಕನ್ನಡಅಭಿಯಾನಹಮ್ಮಿಕೊಳ್ಳಲಾಗುವುದು ಎಂದು ಅವರು ಹೇಳಿದರು.

ಕನ್ನಡ ಭಾಷಾ ಅಭಿಮಾನ ಮಕ್ಕಳಲ್ಲಿ ಬಾಲ್ಯದಿಂದಲೇ ಬೆಳೆಯಬೇಕು. ಈ ಪರಿಸರ ಮನೆಯಿಂದಲೇ ಮೂಡಬೇಕು. ಮನೆಗಳಲ್ಲಿ ಮಕ್ಕಳೊಂದಿಗೆ ಪಾಲಕರು ಅಚ್ಚಕನ್ನಡದಲ್ಲಿ ಮಾತನಾಡಬೇಕು. ಇದರಿಂದ ಮಕ್ಕಳ ಭಾಷಾ ಅಭಿಮಾನ ಹೆಚ್ಚುತ್ತದೆ.

# ತಾಪಂ ಎದುರು ಗ್ರಾಪಂ ನೌಕರರ ಮುಷ್ಕರ



**ರಬಕವಿ-ಬನಹಟ್ಟಿ :** ಗ್ರಾಮ ಪಂಚಾಯತಿಯ 6 ವೃಂದದ ನೌಕರರನ್ನು ಸಿ ಮತ್ತು ಡಿ ದರ್ಜೆಗೆ ಏರಿಸುವಂತೆ ಒತ್ತಾಯಿಸಿ ಗ್ರಾಮ ಪಂಚಾಯತ್ ನೌಕರರ ಸಂಘದಿಂದ ರಬಕವಿ-ಬನಹಟ್ಟಿ ತಾಲೂಕು ಪಂಚಾಯತ್ ಎದುರು ಮುಷ್ಕರ ನಡೆಸಿದರು.

ಬುಧವಾರ ಬೆಳಿಗ್ಗೆಯಿಂದ ಸಂಜೆವರೆಗೆ ನಡೆದ ಮುಷ್ಕರದಲ್ಲಿ ಪಾಲ್ಗೊಂಡ ಸಂಘದ ತಾಲೂಕಾಧ್ಯಕ್ಷ ಶಬ್ಬೀರ ಮುಲ್ಲಾ ಮಾತನಾಡಿ, ಗ್ರಾಮ ಪಂಚಾಯತ್ ಗಳಲ್ಲಿ ಕಾರ್ಯನಿರ್ವಹಿಸುವ ಡಾಟಾ ಎಂಟ್ರಿ ಆಪರೇಟರ್, ಬಿಲ್ ಕಲೆಕ್ಟರ್, ವಾಟರ್ ಮ್ಯಾನ್, ಕ್ಲರ್ಕ್, ಕ್ಲೀನರ್ ಸೇರಿ ತಾಲೂಕಿನಲ್ಲಿ ನೂರಕ್ಕೂ ಹೆಚ್ಚು ನೌಕರರಿದ್ದಾರೆ. ಸರ್ಕಾರದಿಂದ ಅವರಿಗೆ ಯಾವುದೇ ಸೇವಾ ಭದ್ರತೆಯಿಲ್ಲ. ಸರ್ಕಾರದ ಯೋಜನೆಗಳನ್ನು ಗ್ರಾಮೀಣ ಭಾಗದ ಮನೆ ಮನೆಗೂ ತಲುಪಿಸುವ ನಮ್ಮನ್ನು ಸರ್ಕಾರಿ ನೌಕರರರೆಂದು ಪರಿಗಣಿಸಿಲ್ಲ. ಕನಿಷ್ಠ ವೇತನದಲ್ಲಿ ಜೀವನ ನಡೆಸುವ ದುಃಸ್ಥಿತಿ ನಮ್ಮದಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಈಗಾಗಲೇ ಕನಿಷ್ಠ ವೇತನ ನೀಡುತ್ತಿರುವ ಸರ್ಕಾರ ಇಪ್ಪತ್ತು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ನೌಕರರಿಗೆ ಸೇವಾ ಹಿರಿತನದಲ್ಲಿ ಅನ್ಯಾಯವಾಗುತ್ತಿದೆ. ವೇತನವೂ ಸಮರ್ಪಕವಾಗಿ ಮಾಸಿಕ ದೊರಕುತ್ತಿಲ್ಲ. ಹೀಗೆ ಹತ್ತು ಹಲವಾರು ಸಮಸ್ಯೆಗಳನ್ನು ಹೊತ್ತು ನಿಂತಿರುವ ಕಾರ್ಮಿಕರಿಗೆ ಶಾಶ್ವತ ಪರಿಹಾರ ದೊರಕಬೇಕೆಂಬುದು ಬೇಡಿಕೆಯಾಗಿದೆ ಎಂದರು.

ಇದೇ ಸಂದರ್ಭದಲ್ಲಿ ತಾಲುಕು ಪಂಚಾಯತ್ ಕಾರ್ಯನಿರ್ವಾಹಣಾಧಿಕಾರಿ ಸಿದ್ದಪ್ಪ ಪಟ್ಟಿಹಾಳರಿಗೆ ಮನವಿ ಪತ್ರ ಅರ್ಪಿಸಲಾಯಿತು.

ಈ ಸಂದರ್ಭದಲ್ಲಿ ಆನಂದ ವಾಘ, ಮುತ್ತಪ್ಪ ಕಾಂಬಳೆ, ಶ್ರೀಕಂಠಯ್ಯ ಹಿರೇಮಠ, ಯೊಯೇನ್ ತಾಂಬೋಳಿ, ಗುರಪ್ಪ ತವನಿಧಿ, ಮಾರುತಿ ಶೇಗುಣಸಿ, ಚನ್ನಪ್ಪ ಪರಸಪ್ಪಗೋಳ ಸೇರಿದಂತೆ ಇನ್ನೂ ಅನೇಕರು ಮುಷ್ಕರದಲ್ಲಿ ಭಾಗಿಯಾಗಿದ್ದರು.

# ಬಸವೇಶ್ವರ ಕಲಾ ಮಹಾವಿದ್ಯಾಲಯದಲ್ಲಿ ಗುರು ಪೂರ್ಣಿಮೆ ಆಚರಣೆ



**ಬಾಗಲಕೋಟೆ :** ಬಿ.ವಿ.ವಿ.ಸಂಘದ ಬಸವೇಶ್ವರ ಕಲಾ ಮಹಾವಿದ್ಯಾಲಯದಲ್ಲಿ ಗುರು ಪೂರ್ಣಿಮೆ ನಿಮಿತ್ಯ ಸಂಘದ ಸಂಸ್ಥಾಪಕರಾದ ಬೀಳೂರ ಗುರುಬಸವ ಮಹಾಸ್ವಾಮಿಗಳ ಭಾವ ಚಿತ್ರಕ್ಕೆ ವಿಶೇಷ ಪ್ರಜೆ ಸಲ್ಲಿಸಿ ಪುಷ್ಪಾಂಜಲಿ ಸಲ್ಲಿಸುವ ಮೂಲಕ ಆಚರಿಸಲಾಯಿತು. ಇದೆ ಸಂದರ್ಭದಲ್ಲಿ ಹಡಪದ ಅಪ್ಪಣ್ಣ ಅವರ ಜಯಂತಿ ನಿಮಿತ್ಯ ಅವರ ಭಾವಚಿತ್ರಕ್ಕೂ ಪುಷ್ಪಾಂಜಲಿ ಸಲ್ಲಿಸಲಾಯಿತು.

ಮಹಾವಿದ್ಯಾಲಯ ಪ್ರಾಚಾರ್ಯ ಡಾ.ಎಸ್.ಆರ್. ಮುಗನೂರಮಠ, ಡಾ.ಕೆ.ವಿ.ಮಠ , ಡಾ.ಆರ್. ಎಂ.ಬೆಣ್ಣೂರ, ಎನ್.ಎನ್.ಎಸ್ ಅಧಿಕಾರಿಗಳಾದ ಆರ್.ಆರ್.ಅರಷಿಣಗೊಡಿ ಸೇರಿದಂತೆ ಮಹಾವಿದ್ಯಾಲಯದ ಎಲ್ಲ ಪ್ರಾಧ್ಯಾಪಕ ವರ್ಗ ಹಾಗೂ ವಿದ್ಯಾರ್ಥಿಗಳು ಬಾಗವಹಿಸಿದ್ದರು.

# ಡಾ. ಫ.ಗು. ಹಳಕಟ್ಟಿ ಎಂಬ ವಚನ ಗುಮ್ಮಟ

**ರಾಯಭಾಗ :** ನಾಡಿನ ಬಹು ಶ್ರೇಷ್ಠವಾದ ವಚನ ಸಾಹಿತ್ಯ ಸಂಪತ್ತು ನಮ್ಮ ಕೈ ಸೇರಿದ್ದು ಡಾ. ಫ. ಗು. ಹಳಕಟ್ಟಿ ಅವರ ಪರಿಶ್ರಮ ತ್ಯಾಗದಿಂದ ಎಂದು ಡಾ. ಬಿ .ಎಂ ಪಾಟೀಲ ಹೇಳಿದರು

ಅವರು ವಚನ ಪಿತಾಮಹ ಡಾ. ಫ. ಗು. ಹಳಕಟ್ಟಿ ರಾಷ್ಟ್ರೀಯ ಟ್ರಸ್ಟ್ ಅಡಿಯಲ್ಲಿ ಶರಣ ಚೇತನ ಬಳಗ ಹಮ್ಮಿಕೊಂಡ ತಿಂಗಳ ಅಧ್ಯಾತ್ಮ ಜ್ಞಾನದಾಸೋಹ ಕಾರ್ಯಕ್ರಮದಲ್ಲಿ ಡಾ. ಫ. ಗು.ಹಳಕಟ್ಟಿ ಜನ್ಮದಿನೋತ್ಸವ ಹಾಗೂ ವಚನ ಸಾಹಿತ್ಯ ಸಂರಕ್ಷಣೆ ದಿನಾಚರಣೆಯ ಕುರಿತು ವಿಶೇಷ ಉಪನ್ಯಾಸ ನೀಡಿ ಮಾತನಾಡಿದರು.

ಡಾ. ಫ. ಗು.ಹಳಕಟ್ಟಿಯವರು ಸರಕಾರಿ ವಕೀಲರು, ಮುಂಬೈ ಸರ್ಕಾರದ ಶಾಸಕರು, ವಿಜಯಪುರ ನಗರಸಭೆ ಅಧ್ಯಕ್ಷರು, ಶಿಕ್ಷಣ ಸಂಸ್ಥೆಯ ಸಂಸ್ಥಾಪಕರು, ಬ್ಯಾಂಕ್ ಸಂಸ್ಥಾಪಕರು ಹೀಗೆ ಹಲವಾರು ಉನ್ನತ ಹುದ್ದೆಗಳಲಿದ್ದವರು. ಸಾಕಷ್ಟು ಆಸ್ತಿ ಸಂಪತ್ತು ಗಳಿಸಿ ತಮ್ಮ ಇಡೀ ಜೀವನವನ್ನು ಸಿರಿವಂತಿಕೆಯ ವೈಭವದಿಂದ ಕಳೆಯುಬಹುದಾಗಿತ್ತು ಆದರೆ ಹಾಗೆ ಮಾಡಲಿಲ್ಲ ಅವರು ಬಸವಾದಿ ಶರಣರ ವಚನ ಸಾಹಿತ್ಯ ಚರಿತ್ರೆಗಳ ಶೋಧನೆ ಮತ್ತು ಸಮಾಜ ಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡರು ನುಶಿ ಹೆಗ್ಗಣಗಳಿಗೆ ಆಹಾರವಾಗಬಹುದಾಗಿದ್ದ ವಚನ ಸಾಹಿತ್ಯದ ಕಡೆಗೆ ಯಾರು ಗಮನ ಹರಿಸಿರಲಿಲ್ಲ ಮೊಟ್ಟಮೊದಲ ವಚನಗಳನ್ನು ಕಂಡು ಅಭಿಮಾನ ಪಟ್ಟವರೇ




ಡಾ. ಫ. ಗು.ಹಳಕಟ್ಟಿಯವರು ವಚನ ಸಾಹಿತ್ಯವನ್ನು ಸಂಗ್ರಹಿಸಿ ,ಪರಿಸ್ಕರಿಸಿ, ಪ್ರಕಟಿಸಿ 'ವಚನಗುಮ್ಮಟ' ಎಂಬ ಅಭಿಧಾನ ಹೊಂದಿದವರು ಎಂದು ವಿವರಿಸಿದರು.

ಜೀವವಿಮಾ ತಾಲೂಕ ಅಭಿವೃದ್ಧಿ ಅಧಿಕಾರಿ ತಾನಾಜಿ ಶಿರಗುಪ್ಪಿ ಅವರು ಡಾ. ಫ. ಗು. ಹಳಕಟ್ಟಿ ವಚನ ಸಾಹಿತ್ಯ ಸಂಗ್ರಹಿಸಲು ಪಟ್ಟ ಶ್ರಮ ಯುವಕರಿಗೆ ಸ್ಪೂರ್ತಿದಾಯಕ ವಾದದ್ದು ಎಂದು ಹೇಳಿದರು.

ನಿವೃತ್ತ ನೌಕರ ಸಂಘದ ಅಧ್ಯಕ್ಷ ಸಂಗಪ್ಪಾ ಮೀಶಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ವಚನ ಸಾಹಿತ್ಯ ಸಂಪತ್ತನ್ನು ರಕ್ಷಿಸುವುದು ನಮ್ಮೆಲ್ಲರ ಹೊಣೆಯಾಗಿದೆ ಎಂದು ಹೇಳಿದರು.

ಪಿ .ಬಿ. ಮುನ್ಯಾಳ, ಅಶೋಕ ದೇಸಿಂಗೆ, ಎಸ್. ಎಸ್. ಕಾಂಬಳೆ ,ಸಾಕಪ್ಪ ಚೌಗಲೆ, ಪಿ.ಬಿ.ಕುಲಕರ್ಣಿ,ಎ.ಎಸ್. ಮುಗಳಖೋಡ, ಶಿವಪುತ್ರ ಅಮರಶೆಟ್ಟಿ, ಶ್ರೀಧರ ಪಾಟೀಲ, ಸವಿತಾ ದಿಬ್ಬದಮನಿ, ಭಾರತಿ ಪಾಟೀಲ, ವಾಣಿಶ್ರೀ ಸಿರಗುಪ್ಪಿ , ಶಿಲ್ಪಶ್ರೀ ದೊಡವಾಡ, ಸವಿತಾ ಪಾಟೀಲ, ವಚನಾ ಪಾಟೀಲ, ಮೊದಲಾದವರು ಉಪಸ್ಥಿತರಿದ್ದರು.

ಪಾವಣಿ ಮತ್ತು ಶಾಂಭವಿ ದೊಡವಾಡ ಪ್ರಾರ್ಥನೆ ಹಾಡಿದರು, ರಾಯಪ್ಪ ಗೊಂಡೆ, ಬೀರಪ್ಪ ಗೊಂಡೆ, ಮಂಗಳಗೀತೆ ಹಾಡಿದರು. ಮಲ್ಲೇಶ ದೊಡಮನಿ ಶರಣ ಸಮರ್ಪಣೆ ಹೇಳಿದರು.ಕಾಡೇಶ ಐಹೊಳೆ ನಿರೂಪಿಸಿದರು.

# ತಾಯಿ ಹೆಸರಿನಲ್ಲಿ ಸಸಿನೆಟ್ಟು ಬೆಳೆಸಿ

**ಮಹಾಲಿಂಗಪುರ :** ಪ್ರಧಾನಿ ನರೇಂದ್ರ ಮೋದಿಯವರ ಕರೆಯಂತೆ ಪ್ರತಿಯೊಬ್ಬರೂ ತಾಯಿಯ ಹೆಸರಿನಲ್ಲಿ ಸಸಿಗಳನ್ನು ನೆಟ್ಟು ಬೆಳೆಸುವ ಮೂಲಕ ಪರಿಸರವನ್ನು ಉಳಿಸಿ ಬೆಳೆಸುವ ಕಾರ್ಯ
ಮಾಡಬೇಕು ಎಂದರು.

ಇಲ್ಲಿಯ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಬಿಜೆಪಿ ನಗರ ಘಟಕದಿಂದ ಹಮ್ಮಿಕೊಂಡ 'ತಾಯಿ ಹೆಸರಿನಲ್ಲಿ ಒಂದು ಸಸಿ' ನೆಡುವ ಕಾರ್ಯಕ್ರಮದಲ್ಲಿ ಅವರು ಭಾಗವಹಿಸಿ ಸಸಿನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಸಸಿಗಳನ್ನು ಹೆಚ್ಚಾಗಿ ನೆಡುವುದರಿಂದ ಮಳೆ, ನೆರಳು, ತಾಪಮಾನದ ತೀವೃತೆಯನ್ನು ಕಡಿಮೆ ಮಾಡಲು ಸಾಧ್ಯವಿದೆ ಎಂದರು.



ಬಿಡಿಸಿಸಿ ಬ್ಯಾಂಕಿನ ನಿರ್ದೇಶಕ ಬಸನಗೌಡ ಪಾಟೀಲ,
ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಮಹಾಂತೇಶ ಹಿಟ್ಟಿನಮಠ, ಬಿಜೆಪಿ ನಗರ ಘಟಕದ ಅಧ್ಯಕ್ಷ ಶಂಕರಗೌಡ ಪಾಟೀಲ, ಮಹಾಲಿಂಗಪ್ಪಕುಳ್ಳೊಳ್ಳಿ,ಜಿ.ಎಸ್.ಗೊಂಬಿ, ಈರಪ್ಪ ದಿನ್ನಿಮನಿ, ಶಿವಬಸು ಗೌಂಡಿ, ರವಿ ಬಿದರಿ, ವಿಷ್ಣುಗೌಡ ಪಾಟೀಲ, ಚನ್ನಪ್ಪ ಪಟ್ಟಣಶೆಟ್ಟಿ, ಶೇಖರ ಅಂಗಡಿ, ಬಸವರಾಜ ಯರಗಟ್ಟಿ, ಹರೀಶ ನಾಯಕ, ಅರ್ಜುನ ಮೋಪಗಾರ, ಅಜಯ ಹಂದ್ರಾಳ,
ಹಣಮಂತ ಯರಗಟ್ಟಿ, ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ ಮಹೇಶ ಜಿಡ್ಡಿಮನಿ, ಉಪಾಧ್ಯಕ್ಷ ವಿಜಯಕುಮಾರ ಸಬಕಾಳೆ, ಆನಂದ ಪವಾರ, ಬಸವರಾಜ ಮಡಿವಾಳರ, ಕುಮಾರ ನಾರಾಯಣಕರ, ಮಹಾಲಿಂಗ ಕಂಠಿ, ಗುರುರಾಜ ಜಂಬಗಿ, ಬಸವರಾಜ ಭಟ್ಟಿಮಠ, ಬಸವರಾಜ ಗಿರಿಸಾಗರ, ಹಣಮಂತ ಕಾಂಬಳೇಕರ, ಮಲ್ಲು ದಡ್ಡಿಮನಿ, ರವಿ ಗಿರಿಸಾಗರ, ಪ್ರಾಚಾರ್ಯ ಎಸ್. ಎಲ್. ಜೋಡಟ್ಟಿ ಸೇರಿದಂತೆ ಉಪನ್ಯಾಸಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಬ್ಯಾಂಕ್ ಅಧಿಕಾರಿಗಳಿಗೆ ಜಿ.ಪಂ ಸಿಇಓ ಸೂಚನೆ | ಜಾಗೃತಿ ಅಭಿಯಾನಕ್ಕೆ ಚಾಲನೆ

**ಬಾಗಲಕೋಟೆ :** ಎಸ್ ಎಚ್ ಜಿ ಸದಸ್ಯರಿಗೆ ಹಾಗೂ ಕೌಶಲ್ಯ ತರಬೇತಿದಾರರಿಗೆ ಸಾಮಾಜಿಕ ಭದ್ರತಾ ಯೋಜನೆ ಸ್ವಸಹಾಯ ಗುಂಪು ಸದಸ್ಯರನ್ನು ಮತ್ತು ತರಬೇತಿ ಕೇಂದ್ರದ ಶಿಬಿರಾರ್ಥಿಗಳ ಸಾಮಾಜಿಕ ವಿಮಾ ಯೋಜನೆಗಳಾದ ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆ ಹಾಗೂ ಅಟಲ್ ಪಿಂಚಣಿ ಯೋಜನೆಯಡಿ ತರಬೇಕೆಂದು ಹಾಗೂ ಎಲ್ಲ ಸರಕಾರದ ಯೋಜನೆಗಳು ಬಡವರಿಗೆ ತಲುಪಬೇಂದು ಜಿ.ಪಂ. ಸಿಇಓ
ಶಶಿಧರ ಕುರೇರ ಎಲ್ಲ ಜಿಲ್ಲಾ ಬ್ಯಾಂಕ್ ಸಂಯೋಜಕರಿಗೆ ಸೂಚಿಸಿದರು.

ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ಹಾಗೂ ಆರ್‌ಸೆಟಿ ಮತ್ತು ಜಿಲ್ಲಾ ಬ್ಯಾಂಕ್ ಸಂಯೋಜಕರಿಗೆ ಆರ್‌ಸೆಟಿಯಲ್ಲಿ ಆಯೋಜಿಸಿದ ಮೂರು ತಿಂಗಳ ಸಾಮಾಜಿಕ ಭದ್ರತಾ ಯೋಜನೆಗಳ ಜಾಗೃತಿ ಅಭಿಯಾನ ಉದ್ಘಾಟಿಸಿ ಮಾತನಾಡಿದರು.

ಲೀಡ್ ಬ್ಯಾಂಕ್ ವ್ಯವಸ್ಥಾಪಕ ರಾಜಕುಮಾರ ಹೂಗಾರ ಮಾತಾಡಿ, ಗ್ರಾಮೀಣ ಭಾಗದಲ್ಲಿ ಆರ್ಥಿಕತೆ, ಒಳಗೊಳ್ಳುವಿಕೆ ಮಟ್ಟ ಹೆಚ್ಚಿಸಿ ಸಾಮಾಜಿಕ ಭದ್ರತೆ ಹಾಗೂ ವಿಮಾ ಯೋಜನೆಗಳು ಜನರಿಗೆ ತಲುಪಿಸಲು ಜುಲೈ 01 ರಿಂದ ಸೆಪ್ಟೆಂಬರ್ 30ರ ವರೆಗೆ ಮೂರು ತಿಂಗಳ ಕಾಲ ಜಿಲ್ಲೆಯ 195 ಗ್ರಾಮ ಪಂಚಾಯತಿಗಳಲ್ಲಿ ಅಭಿಯಾನ ಹಮ್ಮಿಕೊಳ್ಳಲಾಗಿದೆ.

# ಭಾಸ್ಕರಾಚಾರ್ಯರ ವಿಧಾನದ ಮೂಲಕ ಗಣಿತ ಸಮಸ್ಯೆಗೆ ಸುಲಭ ಪರಿಹಾರ: ಕೋರಿಶೆಟ್ಟಿ

**ವಿಜಯಪುರ :** ಭಾಸ್ಕರಾಚಾರ್ಯರ ವಿಧಾನದ ಮೂಲಕ ಗಣಿತದ ಸಮಸ್ಯೆಗಳನ್ನು ಸುಲಭವಾಗಿ ಪರಿಹರಿಸಬಹುದಾಗಿದೆ ಎಂದು ಮಹಿಳಾ ವಿವಿಯ ನೂತನ ಕುಲಪತಿ ಪ್ರೊ. ವಿಜಯಾ ಬಿ. ಕೋರಿಶೆಟ್ಟಿ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾವಿಶ್ವವಿದ್ಯಾನಿಲಯದಗಣಿತಅಧ್ಯಯನ ವಿಭಾಗ ಹಾಗೂ ಭಾಸ್ಕರಾಚಾರ್ಯ ಅಧ್ಯಯನ ಪೀಠದ ಅಡಿಯಲ್ಲಿ ವಿಶ್ವವಿದ್ಯಾನಿಲಯದ ಪ್ರಸಾರಾಂಗದ ವತಿಯಿಂದ ಶುಕ್ರವಾರ ಆಯೋಜಿಸಿದ್ದ "ಗ್ರಂಥಗಳ- ಲೋಕಾರ್ಪಣೆ" ಸಮಾರಂಭದಲ್ಲಿ ಅವರು ಮಾತನಾಡಿದರು.

ಸಾಮಾನ್ಯ ಪ್ರಕಟಿತ ಪಠ್ಯಪುಸ್ತಕಗಳ ಕಠಿಣ ಶೈಲಿಯಿಂದ ಹೊರಬಂದು, ವಿದ್ಯಾರ್ಥಿಗಳನ್ನು ಅರ್ಥಗರ್ಭಿತ, ಜ್ಯಾಮಿತೀಯ ಹಾಗೂ ಕಾವ್ಯಾತ್ಮಕ ರೀತಿಯಲ್ಲಿ ಚಿಂತಿಸಲು ಪ್ರೋತ್ಸಾಹಿಸುತ್ತದೆ.

ಇದರಿಂದ ವಿದ್ಯಾರ್ಥಿಗಳಿಗೆ ಕಲನಶಾಸ್ತ್ರ, ಬೀಜಗಣಿತ ಮತ್ತು ಸಂಖ್ಯಾಸಿದ್ಧಾಂತದ ಪರಿಕಲ್ಪನೆಗಳನ್ನು ಸುಲಭವಾಗಿ ಅರ್ಥಮಾಡಿಕೊಳ್ಳಲು ಸಹಾಯವಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಹಿಂದೈ ಗಣಿತ ಐತಿಹಾಸಿಕ-ಒಂದು ಮೂಲ ಗ್ರಂಥ ಭಾಗ-2, ಭಾರತದಲ್ಲಿ ಶ್ರೇಣಿ ಗಣಿತ, ಭಾರತೀಯ ಗಣಿತ ಶಾಸ್ತ್ರದ ಚಾರಿತ್ರೆ ಭಾಗ-1, ಬ್ರಹ್ಮಗುಪ್ತಮ್-1 ಗ್ರಂಥಗಳನ್ನು ಬಿಡುಗಡೆಗೊಳಿಸಲಾಯಿತು.




ಕಾರ್ಯಕ್ರಮದಲ್ಲಿ ಮಹಿಳಾ ವಿವಿಯ ಕುಲಸಚಿವ ಶಂಕರಗೌಡ ಸೋಮನಾಳ, ಗ್ರಂಥಗಳ ಲೇಖಕ ಹಾಗೂ ನಿವೃತ್ತ ಚಾರ್ಟರ್ಡ ಅಭಿಯಂತರ
ಡಾ.ವೇಣುಗೋಪಾಲ ಹೆರೂರ, ಹಾಗೂ ಗುಲಬರ್ಗಾ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕ ಡಾ.ಎನ್.ಬಿ ನಡುವಿನಮನಿ, ವಿವಿಯ ವಿವಿಧ ವಿಭಾಗಗಳ ಪ್ರಾಧ್ಯಾಪಕರು, ವಿಜ್ಞಾನ ನಿಕಾಯದ ವಿದ್ಯಾರ್ಥಿನಿಯರು ಹಾಗೂ ಮತ್ತಿತರು ಉಪಸ್ಥಿತರಿದ್ದರು.

ಭಾಸ್ಕರಾಚಾರ್ಯ ಅಧ್ಯಯನ ಪೀಠದ ಸಂಯೋಜಕ ಪ್ರೊ.ಜಿ.ಜಿ.ರಜಪೂತ ಸ್ವಾಗತಿಸಿ, ಭಾಸ್ಕಾರಾಚಾರ್ಯರರ ಕೊಡುಗೆಗಳು ಹಾಗೂ ಗ್ರಂಥಗಳ ಬಗ್ಗೆ ಮಾಹಿತಿ ನೀಡಿದರು. ಪ್ರಸಾರಾಂಗ ನಿರ್ದೇಶಕಿ ಪ್ರೊ.ರಾಜು ಬಾಗಲಕೋಟ ಅತಿಥಿಗಳನ್ನು ಪರಿಚಯಿಸಿದರು. ವಿದ್ಯಾರ್ಥಿನಿಯರಾದ ಸಹನಾ ದೇಶಪಾಂಡೆ ಹಾಗೂ ಸೌಂದರ್ಯ ನಿರೂಪಿಸಿದರು. ಆಸಿಯಾ ದೌಲತಕೋಟಿ ವಂದಿಸಿದರು.

# ಬಾಳಿಗೆ ಬೆಳಕಾಗುವ ಗುರುವಿನ ಸ್ಮರಣೆ ಮಾಡಿ

**ಬಾಗಲಕೋಟೆ :** ಜ್ಞಾನವೆಂಬ ದೀಪದಿಂದ ಅಜ್ಞಾನದ ಕತ್ತಲೆಯನ್ನು ನಿವಾರಿಸಿ ಬಾಳಿಗೆ ಬೆಳಕಾಗುವ ಗುರುವಿನ ಸ್ಮರಣೆ ಮಾಡುವುದು ಎಲ್ಲರ ಕರ್ತವ್ಯವಾಗಿದೆ ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ಇಲ್ಲಿನ ವಿದ್ಯಾಪ್ರಸಾರಕ ಮಂಡಳದ ಎಸ್.ಆರ್. ನರಸಾಪೂರ ಕಲಾ ಹಾಗೂ ಎಂ.ಬಿ. ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಐಕ್ಯೂಎಸಿ ಮತ್ತು ಸಾಂಸ್ಕೃತಿಕ ಚಟುವಟಿಕೆ ವಿಭಾಗ ಗುರುವಾರ ಆಯೋಜಿಸಿದ್ದ 'ಗುರುಪೂರ್ಣಿಮೆ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವ್ಯಕ್ತಿಯ ಸರ್ವತೋಮುಖ ಬೆಳವಣಿಗೆಯಲ್ಲಿ ಗುರುವಿನ ಪಾತ್ರ ದೊಡ್ಡದು. ಅವರ ಆ ಕೊಡುಗೆಯನ್ನು ಕೃತಜ್ಞತೆಯಿಂದ ಸ್ಮರಿಸಿ ವಂದನೆಯನ್ನು ಸಮರ್ಪಿಸುವುದಕ್ಕಾಗಿ ಗುರುಪೂರ್ಣಿಮೆ ಆಚರಿಸಲಾಗುತ್ತಿದೆ. ಗುರುವಿನ ನಡೆ-ನುಡಿ,ಆಚಾರ-ವಿಚಾರ ವ್ಯಕ್ತಿಗಳ ಮೇಲೆ ಪೂರಕ ಪ್ರಭಾವ ಬೀರುತ್ತದೆ. ತನ್ನ ಜ್ಞಾನ ತೇಜಸ್ಸಿನಿಂದ ಶಿಷ್ಯನ ಅಜ್ಞಾನ ಕಳೆದು ಒಳ್ಳೆಯ ದಾರಿ ತೋರುವವನೇ ಗುರು ಆಗಿದ್ದಾನೆ ಎಂದರು.




ಉದಾತ್ತವಾದ ಮೌಲ್ಯಗಳನ್ನು ನೀಡುವುದರ ಮೂಲಕ ಮಾರ್ಗದರ್ಶನ ಮಾಡುವ ಶಕ್ತಿ ಹೊಂದಿರುವ ಪ್ರಕೃತಿಯೂ ಗುರುವೇ ಸರಿ.

ಅದು ಜ್ಞಾನದ ಆಗರವೂ ಹೌದು. ಅದನ್ನು ಯುವ ಸಮುದಾಯ ಅರಿಯಬೇಕು. ಜೀವನದಲ್ಲಿ ಮಹತ್ವದ ತಿರುವು ನೀಡಿ, ಬಾಳಲ್ಲಿ ಬೆಳಕು ಮೂಡಿಸಿ ಅರಿವಿನ ದಾರಿ ತೋರುವ ಗುರುವಿಗೆ ನಮಿಸುವುದು ಎಲ್ಲರ ಕರ್ತವ್ಯ ಎಂದರು.

ಮಹಾಭಾರತ ಬರೆದ ವೇದವ್ಯಾಸರ ಜಯಂತಿಯ ಕಾರಣಕ್ಕೆ ಗುರುಪೂರ್ಣಿಮೆಗೆ 'ವ್ಯಾಸ ಪೂರ್ಣಿಮೆ' ಎಂದೂ ಕರೆಯಲಾಗುತ್ತಿದೆ.

ಸಾಹಿತ್ಯ ಮತ್ತು ಸಂಸ್ಕೃತಿಗೆ ಅವರು ನೀಡಿದ ಕೊಡುಗೆಯನ್ನು,ನಾಡಿನ ಜ್ಞಾನ ಸಂಪತ್ತಾಗಿರುವ ಅವರ ಹಲವು ರಚನೆಗಳನ್ನು ಯುವಕರು ಅಧ್ಯಯನ ಮಾಡಬೇಕಿದೆ. ಈ ಹಿನ್ನಲೆಯಲ್ಲಿ ಇಂತಹ ದಿನಾಚರಣೆಗಳು ಸಹಕಾರಿಯಾಗಲಿವೆ ಎಂದರು.

ಉಪನ್ಯಾಸಕಿ ಶ್ವೇತಾ ಕುಲಕರ್ಣಿ ಪ್ರಾರ್ಥಿಸಿದರು. ಸಂಯೋಜಕ ಡಾ.ಎಸ್.ಎಸ್.ಹಂಗರಗಿ ಸ್ವಾಗತಿಸಿದರು.

ಎಚ್.ಎಸ್. ಗಿಡಗಂಟಿ ವಂದಿಸಿದರು.

ಉಪನ್ಯಾಸಕಿ ಕೀರ್ತಿ ದಾಸರ ನಿರೂಪಿಸಿದರು.

# ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ರೀತಿಯಲ್ಲಿ ನವೋದ್ಯಮ ಆರಂಭವಾಗಲಿ: ಜ್ಯೋತಿರಾದಿತ್ಯ ಸಿಂಧಿಯಾ

## ವಿಟಿಯು ಹಬ್ ಅಂಡ್ ಸ್ಪೋಕ್ ಕೇಂದ್ರ ಉದ್ಘಾಟನೆ ಸಂಶೋಧನೆಗೆ ಹೆಚ್ಚಿನ ಅವಕಾಶ

**ಬೆಂಗಳೂರು :** ನೀವು ನಿಮ್ಮ ಆಲೋಚನೆಗಳನ್ನು ವಿಸ್ತರಿಸಿಕೊಂಡು ಇಂದಿನ ಕಾಲದ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ರೀತಿಯಲ್ಲಿ ನವೋದ್ಯಮ ಆರಂಭವಾಗಲಿ. ಇದು ಭಾರತದ ಅಭಿವೃದ್ಧಿಗೂ ಸಹಕಾರಿ ಆಗುವಂತಿರಬೇಕು ಎಂದು ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹೇಳಿದರು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ(ವಿಟಿಯು) ಬೆಂಗಳೂರಿನಲ್ಲಿರುವ ತನ್ನ ಪ್ರಾದೇಶಿಕ ಕಚೇರಿಯಲ್ಲಿ ಆರಂಭಿಸಿರುವ " ವಿಟಿಯು ವಿಆರ್‌ಐಎಫ್ ಟಿಸಿಓಇ ಹಬ್ ಅಂಡ್ ಸ್ಪೋಕ್ ಆಫ್ ಎಕ್ಸಲೆನ್ಸ್" ಚಾಲನೆ ನೀಡಿ ಮಾತನಾಡಿದ ಅವರು, ಭವಿಷ್ಯದಲ್ಲಿ 6 ಜಿ ಬರಲಿದೆ. ನಾವು ತಂತ್ರಜ್ಞಾನ ಕ್ಷೇತ್ರದ ಬೆಳೆವಣಿಗೆ ಜತೆಗೆ ಕೆಲಸ ಮಾಡುತ್ತಿದ್ದೇವೆ.

ಈ ಹಿಂದೆ ನಡೆದ ಕ್ರಾಂತಿಗಳ ಬಗ್ಗೆ ನಿಮಗೆ ತಿಳಿಸಿದೆ. ಇಂದು ಮಾಹಿತಿ ತಂತ್ರಜ್ಞಾನದ ಕ್ರಾಂತಿ ಆಗಬೇಕಿದೆ. 11 ವರ್ಷದ ಹಿಂದೆ 60 ಬಿಲಿಯಲ್ ಇದ್ದ, ಬ್ರಾಂಡ್ ಬ್ಯಾಂಡ್ ಬಳಕೆದಾರ ಸಂಖ್ಯೆ ಇಂದು 940 ಬಿಲಿಯನ್ ಗೆ ತಲುಪಿದೆ ಎಂದರು. ವಿಶ್ವೇಶ್ವರಯ್ಯ ದೂರು ದೃಷ್ಟಿ ಉಳ್ಳವರಾಗಿದ್ದರು. ಅಂದು ಅವರು
ಅಣೆಕಟ್ಟು ಗಳಿಗಾಗಿ ನಿರ್ಮಾಣ ಮಾಡಿದ ಅಟೋಮೆಟಿಕ್ ಗೇಟುಗಳನ್ನು ನಮ್ಮ ಗ್ವಾಲಿಯರ್ ನಲ್ಲಿ ಸಹ ಅಳವಡಿಸಿದ್ದೇವೆ. ಅವರ ಹೆಸರಲ್ಲಿ ವಿಶ್ವವಿದ್ಯಾಲಯ ಅಮೆರ್ಬಿಸುರುವುದು ಒಳ್ಳೆಯ ವಿಚಾರ. ಇನ್ನು ಈ ಹೊಸ ಹಬ್ ಅಂಡ್ ಸ್ಪೋಕ್ ಕೇಂದ್ರ ಎಲ್ಲರ ಸಂಶೋಧನೆಗೆ ಮತ್ತಷ್ಟು ಉತ್ತೇಜನ ನೀಡಲಿ ಎಂದು ಶುಭ ಹಾರೈಸಿದರು.

ಕೌಶಲ್ಯಾಭಿವೃದ್ಧಿ ಜೀವನೋಪಾಯ ಇಲಾಖೆಯ ಸಚಿವರಾದ ಶ್ರೀ ಡಾ.ಶರಣ ಪ್ರಕಾಶ ಪಾಟೀಲ್ ಮಾತನಾಡಿ, ಈ ಕೇಂದ್ರವನ್ನು ವಿಟಿಯು 1 ಲಕ್ಷ ಚದರ ಅಡಿಯಲ್ಲಿರುವ ವಿಶಾಲವಾದ ಕೇಂದ್ರದಲ್ಲಿ ನಿರ್ಮಾಣ ಮಾಡಿದೆ. ಇದು ಸಂಶೋಧನೆ ಮತ್ತು ನವೋದ್ಯಮ, ಭವಿಷ್ಯದ ಪೀಳಿಗೆ ತಂತ್ರಜ್ಞಾನಕ್ಕೆ ಸಾಮರ್ಥ್ಯ ನಿರ್ಮಾಣ ಮಾಡಲಿದೆ. ಈ ಸೆಂಟರ್ ಆಫ್ ಎಕ್ಸಾಲೆನ್ಸ್(ಸಿಓಇ) ವಿಟಿಯು, ವಿಶ್ವೇಶ್ವರಯ್ಯ ಸಂಶೋಧನೆ ಮತ್ತು ನಾವೀನ್ಯತೆಯ ಫೌಂಡೇಶನ್(ವಿಆರ್‌ಐಎಫ್), ಟೆಲಿಕಾಂ ಸೆಂಟರ್ ಆಫ್ ಎಕ್ಸಲೆನ್ಸ್(ಟಿಸಿಓಇ) ಇಂಡಿಯಾ ನಡುವೆ ಒಂದು ಕಾರ್ಯತಂತ್ರದ ಪಾಲುದಾರಿಕೆಯಾಗಿ ಕೆಲಸ ಮಾಡಲಿದೆ ಎಂದರು.



> **ನಮ್ಮ ವಿಶ್ವವಿದ್ಯಾಲಯವು ವಿದ್ಯಾರ್ಥಿಗಳಿಗೆ ಕಲಿಕೆಗೆ ಉತ್ತಮವಾದ ವಾತಾವರಣವನ್ನು ಸೃಷ್ಟಿಸಿ ಕೊಟ್ಟಿದೆ. ಇದು ಹೊಸ ಸಂಶೋಧನಾ ಕೇಂದ್ರವಾಗಿದ್ದು, ಹಲವು ಕಂಪನಿಗಳು ಸ್ಟಾರ್ಟ್ ಆಪ್ ಆರಂಭಿಸಬಹುದು. ಇದಕ್ಕೆ ಬೇಕಾದ ಸೌಲಭ್ಯವನ್ನು ನಾವು ನೀಡುತ್ತೇವೆ.**
> **- ಡಾ.ಎಸ್.ವಿದ್ಯಾಶಂಕರ್ ,**
> **ಕುಲಪತಿ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ(ವಿಟಿಯು**

ಉದಯೋನ್ಮುಖ ಕ್ಷೇತ್ರಗಳಾದ 5ಜಿ, 6ಜಿ ಕಮ್ಯೂನಿಕೇಷನ್,
ಕೃತಕ ಬುದ್ಧಿಮತ್ತೆ(ಎಐ), ಮಷಿನ್ ಲರ್ನಿಂಗ್(ಎಂಎಲ್), ಆಗ್ಮೆಟೆಂಡ್ ಅಂಡ್ ವರ್ಚುವಲ್ ರಿಯಾಲಿಟಿ(ಎಆರ್. ವಿಆರ್), ಕ್ವಾಟಂ ಕಂಪ್ಯೂಟಿಂಗ್
ಹೆಲ್ತ್‌ಕೇರ್ ಮತ್ತು ಇತರೆ ಪ್ರಮುಖ ತಂತ್ರಜ್ಞಾನದ ಕುರಿತು ಸಂಶೋಧನೆ ನಡೆಯಲಿದೆ. ವಿದ್ಯಾರ್ಥಿಗಳು ಮತ್ತು ಸಂಶೋಧಕರಿಗೆ ಇಂದೊಂದು ಉತ್ತಮವಾದ ಕೇಂದ್ರ ಎಂದರು.

ಹಬ್ ಅಂಡ್ ಸ್ಪೋಕ್ ಕುರಿತು: ರಾಷ್ಟ್ರೀಯ ನಾವೀನ್ಯತೆ ಕೇಂದ್ರವಾಗಿ ಕಾರ್ಯನಿರ್ವಹಿಸುವ ಈ ಕೇಂದ್ರವು ವಿಟಿಯುನ ವಿಸ್ತಾರವಾದ ಶೈಕ್ಷಣಿಕ ಜಾಲವನ್ನು ಬಳಕೆ ಮಾಡಿಕೊಳ್ಳಲಿದೆ. ವಿಟಿಯು ವ್ಯಾಪ್ತಿಯಲ್ಲಿರುವ 210ಕ್ಕೂ ಹೆಚ್ಚಿನ ಎಂಜಿನಿಯರಿಂಗ್
ಕಾಲೇಜುಗಳಿದ್ದು, 20 ಸಾವಿರಕ್ಕೂ ಹೆಚ್ಚು ಪಿಎಚ್.ಡಿ ಪದವೀಧರರು, 4 ಲಕ್ಷಕ್ಕೂ ಹೆಚ್ಚಿನ ಪದವೀಧರರು ಮತ್ತು ಸ್ನಾತಕೋತ್ತರ ಪದವೀಧರರು ಈ ಸಂಶೋಧನಾ ಮತ್ತು ನಾವೀನ್ಯತೆ ಕೇಂದ್ರದ ಸದ್ಬಳಕೆ ಮಾಡಿಕೊಳ್ಳಲಿದ್ದಾರೆ.

ಟಿಸಿಓಇ ತಂತ್ರಜ್ಞಾನ ಚಾಲಿತ ಉದ್ಯಮಶೀಲತೆ ಮತ್ತು ದೊಡ್ಡ ಪ್ರಮಾಣದ ಕೌಶಲ್ಯ ಅಭಿವೃದ್ಧಿಯನ್ನು ಸುಗಮಗೊಳಿಸಲು ದೃಢವಾದ ಇಂಟರ್‌ಫೇಸ್ ಆಗಿ ಜೊತೆಯಾಗಲಿದೆ.

# ಸದೃಢ ಆರೋಗ್ಯದಿಂದ ಭವ್ಯ ರಾಷ್ಟ್ರದ ನಿರ್ಮಾಣ: ಶಿಫಾ ಜಮಾದಾರ




**ವಿಜಯಪುರ :** ಮಹಿಳೆಯರು ಹಾಗೂ ಹದಿಹರೆಯದವರು ಆರೋಗ್ಯದ ಬಗ್ಗೆ ಕಾಳಜಿ ವಹಿಸಿದರೆ ಮುಂದಾಗುವ ಅನಾರೋಗ್ಯವನ್ನು ತಡೆಗಟ್ಟಬಹುದು. ಆರೋಗ್ಯ ಸದೃಢವಾಗಿದ್ದರೆ ಮಾತ್ರ ಭವ್ಯ ರಾಷ್ಟ್ರದ ನಿರ್ಮಾಣದ ಕನಸು ಪೂರ್ಣಗೊಳ್ಳುತ್ತದೆ ಎಂದು ಆರ್ಟ ಆಫ್ ಗಿವಿಂಗ್ ಫೌಂಡೇಶನದ ರಾಷ್ಟ್ರೀಯ ರಾಯಭಾರಿ ಶಿಫಾ ಜಮಾದಾರ ಹೇಳಿದರು.

ನಗರದ ಜಿಲ್ಲಾ ಆಸ್ಪತ್ರೆಯಲ್ಲಿ ಆರ್ಟ ಆಫ್ ಗಿವಿಂಗ್ ಫೌಂಡೇಶನ ಹಾಗೂ ಆರೋಗ್ಯ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಆರೋಗ್ಯ ಅರಿವು ಮತ್ತು ನೆರೆಹೊರೆಯವರ ಉತ್ತಮ ಬಾಂಧವ್ಯ ಎಂಬ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಯುವಕರಲ್ಲಿ ಆಗುವ ಮಾನಸಿಕ ಮತ್ತು ದೈಹಿಕ ಬದಲಾವಣೆ ಬಗ್ಗೆ ಸೂಕ್ತ ತಿಳುವಳಿಕೆ ಇಂದಿನ ಜನಾಂಗದವರಿಗೆ ಅವಶ್ಯವಿದೆ. ಮನುಷ್ಯನ ಆರೋಗ್ಯ ಬಹಳ ಮುಖ್ಯ ಅದರಲ್ಲಿ ವಿಶೇಷವಾಗಿ ಇಂದು ಯುವ ಜನತೆ ದುಶ್ಚಟಗಳಿಗೆ ದಾಸರಾಗಿದ್ದಾರೆ. ಮಾದಕ ವಸ್ತುಗಳಾದ ಗಾಂಜಾ, ಅಫೀಮು, ಕುಡಿತ, ಡ್ರಗ್ ಸೇವನೆ ಬೀಡಿ, ಸಿಗರೇಟ್ ತಂಬಾಕು ಸೇವನೆ ಹೆಚ್ಚಾಗಿ ಕಂಡು ಬರುತ್ತಿದೆ. ಇದನ್ನು ತಡೆಗಟ್ಟಲು ಮತ್ತು ಯುವಜನತೆಗೆ ಅರಿವು ಮೂಡಿಸಬೇಕಾಗಿದೆ ಎಂದರು.

ಕೋವಿಡ್ ಅಂತಹ ಮಾರಕ ರೋಗದ ಬಗ್ಗೆ ಎಚ್ಚರಿಕೆ ವಹಿಸಬೇಕಾಗಿದೆ. ನೆರೆಹೊರೆಯವರಿಗೆ ಸಹಾಯ ಮಾಡುವುದು ಉತ್ತಮ ಸಂಬಂಧಗಳನ್ನು ಬೆಳೆಸಿ ನಿಸ್ವಾರ್ಥ ಸೇವೆ ಮುಖಾಂತರ ಸಮಾಜದಲ್ಲಿ ಶಾಂತಿ, ನೆಮ್ಮದಿ ಪ್ರಗತಿಗಾಗಿ ನಮ್ಮ ಸುತ್ತಮುತ್ತಲಿನ ಪರಿಸರದಲ್ಲಿದ್ದಂತಹ ಜನರಿಗೆ ಸಹಾಯ ಹಸ್ತ ನೀಡಿ ಮಾದರಿ ಸಮಾಜ ನಿರ್ಮಾಣ ಮಾಡಬೇಕೆಂದರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಶಿವಾನಂದ ಮಾಸ್ತಿಹೊಳಿ, ಇಂದಿನ ವಾತಾವರಣದಲ್ಲಿ ಒತ್ತಡ, ಆತಂಕ ಮತ್ತು ಕಿನ್ನತೆ ಹೆಚ್ಚಾಗಿ ಕಂಡು ಬರುತ್ತಿದೆ. ಅದ್ಯಾಗೂ ಮಾನಸಿಕ ಆರೋಗ್ಯವನ್ನು ಸಮಸ್ಯೆಯಾಗಿ ಪರಿಗಣಿಸಲಾಗಿದೆ. ನಮ್ಮಸವಾಲುದೌರ್ಬಲ್ಯವಲ್ಲಶಕ್ತಿಯಸಂಕೇತಎಂದು ನಾವು ನಮ್ಮನ್ನು ನೆನಪಿಸಿಕೊಳ್ಳಬೇಕು. ಮಾನಸಿಕ ಆರೋಗ್ಯವು ದೈಹಿಕ ಆರೋಗ್ಯದಷ್ಟು ಮುಖ್ಯವಾಗಿದೆ. ಒಟ್ಟಾಗಿ ಕೆಲಸ ಮಾಡುವದರಿಂದ ನಾವು ಜಾಗೃತಿ ಹೆಚ್ಚಸಬಹುದು. ವಿಜಯಪುರ ಜಿಲ್ಲಾ ಸರಕಾರಿ ಆಸ್ಪತ್ರೆಯಲ್ಲಿ ಅತ್ಯಾಧುನಿಕ ಎಲ್ಲ ಸೌಕರ್ಯಗಳು ಮತ್ತು ರೀತಿಯ ಶಸ್ತ್ರ ಚಿಕಿತ್ಸೆಗಳು ಉಚಿತವಾಗಿ ಮಾಡಲಾಗುತ್ತಿದೆ. ಖಾಸಗಿ ಆಸ್ಪತ್ರೆಗಳಿಗಿಂತ ಉತ್ತಮವಾಗಿ ಸೇವೆ ನೀಡಲು ಶ್ರಮಿಸುತ್ತಿದ್ದೇವೆ. ಸಾರ್ವಜನಿಕರು ಇದರ ಲಾಭ ಪಡೆಯಬೇಕೆಂದರು.

ಇದೇ ಸಂದರ್ಭದಲ್ಲಿ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಡಾ. ಜಾವೀದ ಜಮಾದಾರ, ಜಿಲ್ಲಾ ಸಲಹಾ ಸಮಿತಿ ಅಧ್ಯಕ್ಷ ಇಲಿಯಾಸಅಹ್ಮದ ಸಿದ್ದಿಕಿ ಮಾತನಾಡಿದರು.

ಎಸ್.ಎ. ಮೋಮಿನ, ವೀಣಾ ಕುಲಕರ್ಣಿ, ರೇಖಾ ಇಂಗಳೇಶ್ವರ, ಸುರೇಂದ್ರಕುಮಾರ ಮಾನಕರ ಉಪಸ್ಥಿತರಿದ್ದರು.

ಆರ್ಟ್ ಆಫ್ ಗಿವಿಂಗ್ ಫೌಂಡೇಶನ ಪರವಾಗಿ ಜಿಲ್ಲಾ ಆಸ್ಪತ್ರೆಯಲ್ಲಿರುವ ಬಡ ರೋಗಿಗಳಿಗೆ ಹಣ್ಣು ಹಂಪಲು ಹಾಗೂ ಬಿಸ್ಕಿಟ್, ಜ್ಯೂಸ್ ಮುಂತಾದ ವಸ್ತುಗಳನ್ನೊಳಗೊಂಡ ಆಹಾರ ಕಿಟ್‌ನ್ನು ವಿತರಿಸಲಾಯಿತು.

# ಎಲ್ಲ ಸಂಪತ್ತುಗಳಲ್ಲಿ ಆರೋಗ್ಯ ಸಂಪತ್ತು ಮುಖ್ಯ: ಸಿದ್ದಲಿಂಗಶ್ರೀ



**ತಾಳಿಕೋಟೆ :** ಮನುಷ್ಯನ ಎಲ್ಲ ಸಂಪತ್ತುಗಳಲ್ಲಿ ಮುಖ್ಯವಾದ ಸಂಪತ್ತು ಆರೋಗ್ಯ ಸಂಪತ್ತಾಗಿದ್ದು ಎಲ್ಲರೂ ಆರೋಗ್ಯವನ್ನು ಕಾಪಾಡಿಕೊಳ್ಳಲು ಮೊದಲು ಆದ್ಯತೆ ನೀಡಬೇಕು ಅಂದರ ಬಾಳಿಗೆ ಬೆಳಕಾಗುವಂತಹ ಕಾರ್ಯ ಮಾಡುತ್ತಾ ಸಾಗಿರುವ ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ ಅವರ ಮೇಲೆ ಶ್ರೀ ಖಾಸ್ಗತನ ಅನುಗ್ರಹವಿದೆ ಎಂದು ಶ್ರೀ ಖಾಸ್ಗತೇಶ್ವರ ಮಠದ ಬಾಲ ಶಿವಯೋಗಿ ಶ್ರೀ ಸಿದ್ದಲಿಂಗ ದೇವರು ನುಡಿದರು.

ಪಟ್ಟಣದ ಶ್ರೀ ಖಾಸ್ಗತೇಶ್ವರ ಜಾತ್ರಾ ಮಹೋತ್ಸವ ಅಂಗವಾಗಿ ವಿಜಯಪುರದ ಬಿ.ಎಂ.ಪಾಟೀಲ ವೈದ್ಯಕೀಯ ಮಹಾ ವಿದ್ಯಾಲಯ ಹಾಗೂ ವಿಜಯಪುರ ಅನುಗ್ರಹ ವಿಜನ್ ಪೌಂಡೇಶನ್, ಅನುಗ್ರಹ ಕಣ್ಣಿನಆಸ್ಪತ್ರೆ,ಜಿಲ್ಲಾಅಂದತ್ವನಿವಾರಣೆಸಂಸ್ಥೆ ವಿಜಯಪುರ ಹಾಗೂ ಶ್ರೀ ಖಾಸ್ಗತೇಶ್ವರ ಮಠದ ಸಹಯೋಗದಲ್ಲಿ ಶನಿವಾರರಂದು ಶ್ರೀ ಖಾಸ್ಗತೇಶ್ವರ ಸಭಾ ಭವನದಲ್ಲಿ ಏರ್ಪಡಿಸಲಾದ ಶ್ರೀ ಖಾಸ್ಗತನ ಆರೋಗ್ಯ ಜಾತ್ರೆಗೆ ಚಾಲನೆ ನೀಡಿ ಮಾತನಾಡುತ್ತಿದ್ದ ಅವರು ಈ ಭಾಗದ ನೂರಕ್ಕೂ ಅಧಿಕ ಗ್ರಾಮಗಳ ಜನರು ಶ್ರೀ ಖಾಸ್ಗತ ಮಠದ ಭಕ್ತರಾಗಿದ್ದಾರೆಅವರಆರೋಗ್ಯಚೆನ್ನಾಗಿದ್ದರೆ ಶ್ರೀಮಠದ ಜಾತ್ರೆಯೂ ವೈಭವಪೂರಿತವಾಗಿ ಜರುಗಲಿದೆ ಎಂಬ ಕಾರಣದಿಂದ ಲಿಂ.ವಿರಕ್ತ ಮಹಾಸ್ವಾಮಿಗಳ ಆಶಯದಂತೆ ಸರ್ವ ರೋಗಿಗಳಿಗೂ ಒಂದೇ ಸೂರಿನಡಿ ಆರೋಗ್ಯ ತಪಾಸಣೆಯ ಜೊತೆಗೆ ಚಿಕಿತ್ಸೆ ಕೊಡಿಸಬೇಕೆಂಬ ಸದ್ದಿಚ್ಛೆಯೊಂದಿಗೆ ಈ ಭಾರಿಯ ಜಾತ್ರೋತ್ಸವದಲ್ಲಿ ಆರೋಗ್ಯ ಜಾತ್ರೆ ಎಂಬ ಹೆಸರಿನೊಂದಿಗೆ ಎಲ್ಲ ರೋಗಿಗಳಿಗೆ ತಪಾಸಣೆಗೋಸ್ಕರ ವಿಜಯಪುರದ ಬಿ.ಎಂ.ಪಾಟೀಲ ವೈದ್ಯಕೀಯ ಮಹಾ ವಿದ್ಯಾಲಯ ಹಾಗೂ ಶ್ರೀ ಖಾಸ್ಗತ ಮಠದ ಭಕ್ತರಾದ ಅನುಗ್ರಹ ಆಸ್ಪತ್ರೆಯ ನೇತ್ರ ತಜ್ಞ ವೈದ್ಯರಾದ ಡಾ.ಪ್ರಭುಗೌಡ ಲಿಂಗದಳ್ಳಿ ಅವರ ಜೊತೆಗೆ ಮಾತನಾಡಿದಾಗ ಸರ್ವ ರೋಗಿಗಳಿಗೆ ಉಚಿತವಾಗಿ ತಪಾಸಣೆ ಮ್ತು ಚಿಕಿತ್ಸೆ ಕೊಡಿಸುವಂತಹ ಕೆಲಸಕ್ಕೆ ಬಿ.ಎಂ.ಪಾಟೀಲ ವೈದ್ಯಕೀಯ ಮಹಾ ವಿದ್ಯಾಲಯದ ಮುಖ್ಯಸ್ಥರೊಂದಿಗೆ ಚರ್ಚಿಸಿ ಶ್ರೀ ಮಠದ ಶ್ರೀ ಖಾಸ್ಗತಜ್ಜನ ಆರೋಗ್ಯ ಜಾತ್ರೆಗೆ ಸಹಕರಿಸಿದ್ದಾರೆಇದರಜೊತೆಗೆಸಾಕಷ್ಟುಜನಯುವ ಸಮೂಹ ರಕ್ತದಾನ ಮಾಡಲು ಮುಂದೆ ಬಂದಿದ್ದಾರೆ ಈ ಶಿಬಿರದ ಆಯೋಜನೆಗೆ ಕೈ ಜೋಡಿಸಿದ ಡಾ.ಪ್ರಭುಗೌಡರ ಮೇಲೆ ಶ್ರೀ ಖಾಸ್ಗತನ ಅನುಗ್ರಹವು ಸದಾ ಇರಲಿದೆ ಎಂದರು.

ವಿಜಯಪುರ ಅನುಗ್ರಹ ಕಣ್ಣಿನ ಆಸ್ಪತ್ರೆಯ ಮುಖ್ಯಸ್ಥರಾದ ಡಾ.ಪ್ರಭುಗೌಡ ಲಿಂಗದಳ್ಳಿ ಅವರು ಮಾತನಾಡಿ ಮನುಷ್ಯನಿಗೆ ಸಾಮಾನ್ಯವಾಗಿ ಆರೋಗ್ಯ ಕೆಡುವದು ಸಹಜ ಹಾಗೆಂದ ಮಾತ್ರಕ್ಕೆ ಆರೋಗ್ಯವನ್ನು ಯಾರೂ ನಿರ್ಲಕ್ಷಿಸಬಾರದು ಶ್ರೀ ಖಾಸ್ಗತೇಶ್ವರ ಮಠವು ಭಕ್ತರ ಪಾಲಿನ ಆಶಾಕಿರಣವಾಗಿದೆ ಭಕ್ತರೇ ಶ್ರೀಮಠದ ಆಸ್ತಿ ಎಂದು ಸಾರಿ ಸಾರಿ ಹೇಳುತ್ತಿರುವ ಸಿದ್ದಲಿಂಗಶ್ರೀಗಳು ತಮ್ಮ ಮಠದ ಭಕ್ತರ ಆರೋಗ್ಯದ ಬಗ್ಗೆಯೂ ಕಾಳಜಿ ವಹಿಸುವದರೊಂದಿಗೆ ಸರ್ವ ರೋಗಿಗಳಿಗೆ ಒಂದೇ ಸೂರಿನಡಿ ತಪಾಸಣೆಯ ಜೊತೆಗೆ ಚಿಕಿತ್ಸೆ ಕೊಡಿಸಲು ಶ್ರೀ ಖಾಸ್ಗತಜ್ಜನ ಆರೋಗ್ಯ ಜಾತ್ರೆಯನ್ನು ಹಮ್ಮಿಕೊಂಡು ಭಕ್ತರಿಗಾಗಿ ಶ್ರೀಮಠವು ಇದೆ ಎಂದು ತೋರಿಸಿಕೊಟ್ಟಿದ್ದಾರೆ ಈ ಹಿಂದೆ ಕೋವಿಡ್ ಸಮಯದಲ್ಲಿಯೂ ಕೂಡಾ ಗ್ರಾಮೀಣ ಭಾಗದ 23 ಸಾವಿರ ಕುಟುಂಭಗಳಿಗೆ ಶ್ರೀಮಠದ ವತಿಯಿಂದ ದವಸ ದಾನ್ಯದ ಕಿಟ್ ನೀಡಿ ಅವರ ಹಸಿವು ತಣಿಸುವಂತಹ ಕೆಲಸ ಮಾಡಿದ್ದಾರೆ ಎಲ್ಲ ಭಕ್ತರಿಗೂ ಬಡವರಿಗೆ ಜಿಲ್ಲಾ ಕೇಂದ್ರ ಸ್ಥಳಗಳಲ್ಲಿರುವ ಆಸ್ಪತ್ರೆಗಳಿಗೆ ಬರಲು ತೊಂದರೆಯಾಗುತ್ತದೆ ಎಂಬ ಕಾರಣದಿಂದ ಸರ್ವ ರೋಗಿಗಳಿಗೆ ಒಂದೇಡೆ ಸೇರಿಸಿ ಆರೋಗ್ಯ ಕಾಪಾಡುವಂತಹ ಕಾರ್ಯ ಮಾಡಿರುವದು ಶ್ಲಾಘನೀಯವಾಗಿದೆ ಎಂದ ಅವರು ಅನುಗ್ರಹ ಆಸ್ಪತ್ರೆಯು ಲಕ್ಷಾಂತರ ಜನರಿಗೆ ಉಚಿತವಾಗಿ ನೇತ್ರ ಚೀಕಿತ್ಸೆಯನ್ನು ಮಾಡಿದೆ ಬಿ.ಎಂ.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಜೊತೆಗೆ ನಮ್ಮ ಆಸ್ಪತ್ರೆಯನ್ನು ತೊಡಗಿಸಿಕೊಂಡು ಬಡವರಿಗೆ ಅನುಕೂಲ ಕಲ್ಪಿಸುವಂತಹ ಕೆಲಸ ಮಾಡುತ್ತಾ ಸಾಗಿದ್ದೇವೆಂದರು.

ಈ ಆರೋಗ್ಯ ತಪಾಸಣೆಯಲ್ಲಿ 350 ನೇತ್ರ ತಪಾಸಣೆ 80 ಶಸ್ತ್ರ ಚೀಕೀತ್ಸೆಗೆ ಆಯ್ಕೆ ಮಾಡಲಾಯಿತು. ಬಿಎಲ್‌ಡಿಯಿಂದ ಇತರೆ 300 ರೋಗಿಗಳಿಗೆ ತಪಾಸಣೆ ಕೈಗೊಳ್ಳಲಾಯಿತು. ಈ ಶಿಬಿರದಲ್ಲಿ 45 ಜನರು ರಕ್ತದಾನ ಮಾಡಿದರು.

ಈ ಕಾರ್ಯಕ್ರಮದಲ್ಲಿ ಶ್ರೀ ಖಾಸ್ಗತೇಶ್ವರ ಮಠದ ಉಸ್ತುವಾರಿ ವೇ.ಮುರುಘೇಶ ವಿರಕ್ತಮಠ,ಡಾ.ವ್ಹಿ.ಎಸ್.ಕಾರ್ಚಿ,ಡಾ.ನಜೀರ ಕೋಳ್ಯಾಳ, ಡಾ.ಎ.ಎ.ನಾಲಬಂದ, ಡಾ.ರವಿ ಅಗರವಾಲಾ, ಒಳಗೊಂಡು ಬಿ.ಎಂ.ಪಾಟೀಲ ವೈದ್ಯಕೀಯ ಮಹಾ ವಿದ್ಯಾಲಯದ ವೈದ್ಯರು, ಹಾಗೂ ಸಿಬ್ಬಂದಿಗಳು, ಹಾಗೂ ಅನುಗ್ರಹ ಕಣ್ಣಿನ ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಪ್ರತಿಭಟನೆ

**ಬಾಗಲಕೋಟೆ :** ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಆಲ್ ಇಂಡಿಯಾ ಯುನೈಟೆಡ್ ಯೂನಿಯನ್ ಸೆಂಟರ್ (ಎಐಯುಟಿಯುಸಿ) ಜಿಲ್ಲಾ ಸಮಿತಿಯಿಂದ ಇಂದು ಬಾಗಲಕೋಟೆಯಲ್ಲಿ ಪ್ರತಿಭಟನೆ ನಡೆಸಲಾಯಿತು.ನಗರದ ಎಲ್.ಐ.ಸಿ. ವೃತ್ತದಿಂದ ಜಿಲ್ಲಾಡಳಿತ ಭವನದವರೆಗೆ




ಪ್ರತಿಭಟನಾ ಮೆರವಣಿಗೆ ನಡೆಸಿದರು. ಮೆರವಣಿಗೆ ಉದ್ದಕ್ಕೂ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಹಳೆ ಪಿಂಚಣಿ ಯೋಜನೆ ಮರುಸ್ಥಾಪನೆ, ರಾಷ್ಟ್ರೀಯ ಕನಿಷ್ಠ ವೇತನವನ್ನು ತಿಂಗಳಿಗೆ ?26,000 ಕ್ಕೆ ನಿಗದಿ, ಕಾರ್ಮಿಕ ವಿರೋಧಿ ನಾಲ್ಕು ಸಂಹಿತೆಗಳನ್ನು ರದ್ದುಗೊಳಿಸಬೇಕು.ಕಾರ್ಮಿಕರ ಹಕ್ಕುಗಳನ್ನು ಕಿತ್ತೆಸೆದು ಖಾಸಗೀಕರಣದತ್ತ ನಡಿಗೆ ಇಟ್ಟಿರುವ ಸರ್ಕಾರದ ನೀತಿಗಳನ್ನು ಖಂಡಿಸಿದರು.ಕಾರ್ಮಿಕರ ಸಾಮಾಜಿಕ ಭದ್ರತೆ, ಸೇರಿದಂತೆ ಹಲವುಬೇಡಿಕೆಗಳಕುರಿತುಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಮಂಜುಳಾ ನಾಯಕ, ಅಂಜನಾ ಕುಂಬಾರ, ಮೈತ್ರಾ ಹಿರೇಮಠ, ಕಾಶಿಬಾಯಿ ಯಾವಗಲ್, ಶಾಂತಾ ಜಾನವಾಡ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

## ಕಮಿಷನ್ ನೀಡಲು ಆಗ್ರಹಿಸಿ ಪಡಿತರ ಸಂಘದಿಂದ ಮನವಿ

# ಅಗಸ್ಟ ಅಂತ್ಯದೊಳಗೆ ಕಮಿಷನ್ ನೀಡದಿದ್ದರೆ, ಅಗಸ್ಟ್ ತಿಂಗಳಿಂದ ಪಡಿತರ ವಿತರಣೆ ಸ್ಥಗಿತ



**ರಬಕವಿ-ಬನಹಟ್ಟಿ :** ರಾಜ್ಯ ಸರ್ಕಾರ ರಾಜ್ಯದ ಪಡಿತರ ವಿತರಕರ ಕಮೀಷನ್ ಹಣವನ್ನು ಅಗಸ್ಟ್ ತಿಂಗಳ ಅಂತ್ಯದೊಳಗೆ ಕೊಡದೇ ಇದ್ದರೆ, ಅಗಸ್ಟ್ ತಿಂಗಳಿಂದ ಪಡಿತರ ವಿತರಣೆಯನ್ನು ಸ್ಥಗಿತಗೊಳಿಸಲಾಗುವುದು ಎಂದು ರಬಕವಿ ಬನಹಟ್ಟಿ ತಾಲ್ಲೂಕು ಪಡಿತರ ವಿತರಕರ ಸಂಘದ ಅಧ್ಯಕ್ಷ ಗಜಾನನ ನಾಗರಾಳ ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಅವರು ಗುರುವಾರ ರಬಕವಿ ಬನಹಟ್ಟಿ ತಹಶೀಲ್ದಾರ್ ಕಾರ್ಯಾಲಯದಲ್ಲಿ ಶಾಸಕ ಸಿದ್ದು ಸವದಿ ಮತ್ತು ತಹಶೀಲ್ದಾರ್ ಗಿರೀಶ ಸ್ವಾದಿಯವರಿಗೆ ಮನವಿ ಪತ್ರ ಸಲ್ಲಿಸಿ ಮಾತನಾಡಿದರು. ನ್ಯಾಯ ಬೆಲೆ ಅಂಗಡಿಕಾರರಿಗೆ 2024 ರಲ್ಲಿಯ ಫೆಬ್ರುವರಿ ಮತ್ತು ಮಾರ್ಚ್ ಎರಡು ತಿಂಗಳ ಕಮೀಷನ್ ಬಂದಿರುವುದಿಲ್ಲ. ಅದೇ ರೀತಿಯಾಗಿ 2025 ರಲ್ಲಿ ಫೆಬ್ರುವರಿಯಿಂದ ಜೂನ್ ತಿಂಗಳವರೆಗೆವಿತರಕರಿಗೆಕಮೀಷನ್‌ಬಂದಿರುವುದಿಲ್ಲ. ಅದೇ ರೀತಿಯಾಗಿ ಐದು ವರ್ಷದಿಂದ ಇ- ಕೆವೈಸಿ ಹಣವನ್ನು ಕೂಡಾ ನಮಗೆ ನೀಡಿರುವುದಿಲ್ಲ. ಆದ್ದರಿಂದ ನಮ್ಮ ಕಮೀಷನ್ ಹಣವನ್ನು ಮತ್ತು ಇ-ಕೆವೈಸಿ ಹಣವನ್ನು ನಮಗೆ ಬಿಡುಗಡೆ ಮಾಡಬೇಕು ಎಂದು ಶಿಪಾರಸ್ಸು ಮಾಡಬೇಕು. ಕಮೀಷನ್ ವಿತರಣೆಯಾಗದೆ ಇರುವುದರಿಂದ ನ್ಯಾಯ ಬೆಲೆ ಅಂಗಡಿಗಳ ನಿರ್ವಹಣೆಗೆ ತೊಂದರೆಯಾಗುತ್ತಿದೆ ಎಂದು ಗಜಾನನ ನಾಗರಾಳ ತಿಳಿಸಿದರು.

ಈ ಸಂದರ್ಭದಲ್ಲಿ ಮಹಾದೇವ ಕಡಬಲ್ಲನವರ, ಚಂದ್ರಶೇಖರ ಸಜ್ಜನವರ, ಮಹಾದೇವ ಗಿಡದಾನಪ್ಪಗೋಳ, ತುಳಜಪ್ಪ ಕುಂಚನೂರ, ಆರಿಫ್ ಕೊಣ್ಣೂರ, ಸುಭಾಸ ಗಿರಿಸಾಗರ, ಶ್ರೀಶೈಲ ಆಸಂಗಿ, ವಿಜಯ ಜವಳಗಿ, ರವೀಂದ್ರ ಗೊಂದಿ ಸೇರಿದಂತೆ ರಬಕವಿ ಬನಹಟ್ಟಿ ತಾಲ್ಲೂಕು ಪಡಿತರ ವಿತರಕರ ಸಂಘದ ಸದಸ್ಯರು ಭಾಗವಹಿಸಿದ್ದರು.

# ವಿಜಯಪರ ಜಿಲ್ಲಾ ಘಟಕದಿಂದ 19 ರಂದು ಪತ್ರಿಕಾ ದಿನಾಚರಣೆ



**ವಿಜಯಪುರ :** ವಿಜಯಪುರ ಜಿಲ್ಲೆಯಲ್ಲಿ ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಷ್ಕಾರ, ವಾರ್ಷಿಕ ಪ್ರಶಸ್ತಿ ಪ್ರಧಾನ ಸಮಾರಂಭ ಹಾಗೂ ಪತ್ರಿಕಾ ದಿನಾಚರಣೆ ಅಂಗವಾಗಿ ಜುಲೈ 19 ರಂದು ಜರುಗಲಿರುವ ಸಮಾರಂಭ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಭಾಗವಹಿಸುವಂತೆ ಸಚಿವ ಶ್ರೀ ಶಿವಾನಂದ ಪಾಟೀಲ, ಮುಖ್ಯ ಮಂತ್ರಿಗಳ ಮಾದ್ಯಮ ಸಲಹೆಗಾರರಾದ ಶ್ರಿ ಕೆ.ವಿ.ಪ್ರಭಾಕರ, ಕಾನಿಪ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ, ಕಾನಿಪ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಇವರನ್ನು ಆವ್ಹಾನಿಸಲು ಜಿಲ್ಲೆಯ ಕಾನಿಪ ಪ್ರಧಾನ ಕಾರ್ಯದರ್ಶಿ ಮೋಹನ ಕುಲಕರಣಿ, ರಾಜ್ಯ ಕಾರ್ಯಕಾರಿ ನಾಮನಿರ್ದೇಶನ ಸದಸ್ಯ ಕೆ.ಕೆ.ಕುಲಕರ್ಣಿ ಹಾಗೂ ಜಿಲ್ಲಾ ಖಜಾಂಚಿ ರಾಹುಲ್ ಆಪ್ಟೆ ಅವರು ಬೆಂಗಳೂರಿಗೆ ತೆರಳಿ ಅತಿಥಿಗಳನ್ನು ಅಮಂತ್ರಿಸಿದರು. ಈ ಎಲ್ಲರೂ ಕಾರ್ಯಕ್ರಮಕ್ಕೆ ಭಾಗವಹಿಸುವ ಭರವಸೆ ನೀಡಿದ್ಧಾರೆಂದು ಮೋಹನ ಕುಲಕರ್ಣಿ ತಿಳಿಸಿದ್ದಾರೆ.

# ಜಿ.ಪಂ ಕೆಡಿಪಿ ತ್ರೈಮಾಸಿಕ ಸಭೆ ಜುಲೈ 19ಕ್ಕೆ ಮುಂದೂಡಿಕೆ

**ಬಾಗಲಕೋಟೆ :** ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಜುಲೈ 18 ರಂದು ನಿಗದಿಪಡಿಸಿದ್ದ ಜಿಲ್ಲಾ ಪಂಚಾಯತ ಪ್ರಥಮ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಅನಿವಾರ್ಯ ಮುಂದೂಡಿ ಜುಲೈ 19 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಜರುಗಲಿದೆ ಎಂದು ಜಿ.ಪಂ ಸಿಇಓ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಬಕೋವಿ ಚುನಾವಣೆ 12 ನಿರ್ದೇಶಕರ ಆಯ್ಕೆ ಪಟಾಕಿ ಸಿಡಿಸಿ ಸಂಭ್ರಮಿಸಿದ ಬೆಂಬಲಿಗರು



**ಬಳ್ಳಾರಿ :** ಬಳ್ಳಾರಿ: ರಾಯಚೂರು , ಬಳ್ಳಾರಿ, ಕೊಪ್ಪಳ, ವಿಜಯನಗರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ 12 ನಿರ್ದೇಶಕರ ಸ್ಥಾನಗಳಿಗೆ ಗುರುವಾರ ಚುನಾವಣೆ ನಡೆದಿದ್ದು, ಚುನಾವಣೆಯಲ್ಲಿ ಆಯ್ಕೆಯಾದ ನೂತನ ನಿರ್ದೇಶಕರಿಗೆ ಚುನಾವಣೆ ಅಧಿಕಾರಿ ಪ್ರಮೋದ್ ಅವರು ಪ್ರಮಾಣ ಪತ್ರಗಳನ್ನು ವಿತರಿಸಿದರು. ಚುನಾವಣೆಯಲ್ಲಿ ವಿಜಯಿ ಆದವರ ವಿವರಗಳು, ಕೊಪ್ಪಳ ಜಿಲ್ಲೆ: ಕೃಷ್ಣಾ ರೆಡ್ಡಿ 106 ಮತಗಳು, ಮಹಿಳಾ ಕ್ಷೇತ್ರದಿಂದ ಕುಕನೂರಿನ ಕಮಲವ್ವ 92 ಮತಗಳು,ಮಂಜುನಾಥ್94,ಎನ್.ಸತ್ಯನಾರಾಯಣ 93 ಮತಗಳನ್ನು ಪಡೆದು ಆಯ್ಕೆಯಾದರು. ರಾಯಚೂರು ಜಿಲ್ಲೆ: ಬಿ.ಪ್ರವೀಣ್ ಕುಮಾರ್ 31 ಮತಗಳು, ಅಮರಗುಂಡಪ್ಪ 31 ಮತಗಳು, ಭೀಮನಗೌಡ 24 ಮತಗಳು, ಮಹಿಳಾ ಕ್ಷೇತ್ರದಿಂದ ಎನ್.ಸೀತಾರಾಮ ಲಕ್ಷ್ಮಿ ಅವರು 28 ಮತಗಳನ್ನು ಪಡೆದು ಆಯ್ಕೆಯಾದರು. ಅಖಂಡ ಬಳ್ಳಾರಿ ಜಿಲ್ಲೆ: ಎಲ್.ಬಿ.ಪಿ. ಭೀಮಾ ನಾಯ್ಕ್ 183 ಮತಗಳು, ಎಚ್. ಮರಳುಸಿದ್ದಪ್ಪ 165, ಐಗೋಳು ಚಿದಾನಂದ 159 ಮತಗಳು, ಮಹಿಳಾ ಕ್ಷೇತ್ರದಿಂದ ರತ್ನಮ್ಮ ಎಚ್ 147 ಮತಗಳನ್ನು ಪಡೆದು ಆಯ್ಕೆಯಾದರು ಎಂದು ಚುನಾವಣೆ ಅಧಿಕಾರಿ ಪ್ರಮೋದ್ ಅವರು ಅಧಿಕೃತವಾಗಿ ಘೋಷಿಸಿ, ಪ್ರಮಾಣ ಪತ್ರಗಳನ್ನು ವಿತರಿಸಿದರು. ಫಲಿತಾಂಶ ಹೊರ ಬೀಳುತ್ತಿದ್ದಂತೆ ಜಮಾಯಿಸಿದ್ದ ಅಪಾರ ಬೆಂಬಲಿಗರು, ಅಭಿಮಾನಿಗಳು ನಗರದ ರಾಬಕೋವಿ ಹಾಲು ಒಕ್ಕೂಟದ (ಕೆಎಂಎಫ್) ಕಚೇರಿ ಬಳಿಯ ಶ್ರೀ ಕನಕದಾಸ ವೃತ್ತದ ಬಳಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ನಗರದ ರಾಬಕೋವಿ ಹಾಲು ಒಕ್ಕೂಟದ ಕಚೇರಿಯಲ್ಲಿ ಬೆಳಿಗ್ಗೆ ನಿಗಧಿತ ಅವಧಿಯಲ್ಲಿ ಚುನಾವಣೆ ಪ್ರಕ್ರಿಯೆ ಪ್ರಾರಂಭವಾಯಿತು. ಮಧ್ಯಾಹ್ನದ ಬಳಿಕ ಚುನಾವಣೆ ಪ್ರಕ್ರಿಯೆ ಬಿರುಸು ಪಡೆದುಕೊಂಡಿತು . ಕೆಎಂಎಫ್ ಮಾಜಿ ರಾಜ್ಯಅಧ್ಯಕ್ಷ ಭೀಮಾ ನಾಯ್ಕ್ ಅವರ ನೇತೃತ್ವದಲ್ಲಿ ಮಧ್ಯಾಹ್ನ ಸುಮಾರು 6 ರಿಂದ 7 ಖಾಸಗಿ ಬಸ್ ಸೇರಿ ವಿವಿಧ ವಾಹನಗಳ ಮೂಲಕ ಮತದಾರರು ಕಛೇರಿಯತ್ತ ಹೆಜ್ಜೆ ಹಾಕಿ, ಸರದಿಯಲ್ಲಿ ನಿಂತು ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಿದರು. ಈ ವೇಳೆ ಕಚೇರಿ ಬಳಿಯ ಶ್ರೀ ಕನಕದಾಸ ವೃತ್ತದ ಬಳಿ ಹೈಡ್ರಾಮಾ ನಡೆಯಿತು. ಬಸ್ ನಿಂದ ಮತದಾರರು ಕೆಳಗಿಳಿಯುತ್ತಿದ್ದಂತೆಸ್ಥಳದಲ್ಲಿದ್ದಕೆಲವರು,ದಬ್ಬಾಳಿಕೆಗೆ ಮತ ಹಾಕಬೇಡಿ, ದೌರ್ಜನ್ಯ ನಡೆಯು ತ್ತಿದೆ, ಬಡವರನ್ನು ನೋಡಿ, ಬಡವರಿಗೆ, ರೈತರ ಪರವಾಗಿ ದುಡಿಯುವವರಿಗೆ ಮತ ಹಾಕಿ ಬೆಂಬಲಿಸಿ ಎಂದು ಘೋಷಣೆ ಕೂಗಿದರು. ಪಟಾಕಿ ಸಿಡಿಸಿ ಸಂಭ್ರಮ: ನೂತನ ನಿರ್ದೇಶಕರಾಗಿ ಆಯ್ಕೆಯಾಗುತ್ತಿದ್ದಂತೆ ಚುನಾವಣೆ ಅಧಿಕಾರಿ ಪ್ರಮೋದ್ ಅವರು ಪ್ರಮಾಣ ಪತ್ರಗಳನ್ನು ವಿತರಿಸಿದರು. ಗೆಲುವಿನ ನಗೆಯಲ್ಲಿ ಕಚೇರಿಯಿಂದ ಹೋರ ಬಂದ ನೂತನ ಸದಸ್ಯರಿಗೆ ಅಭಿಮಾನಿಗಳು, ಬೆಂಬಲಿಗರು ಹೂಗುಚ್ಛ ನೀಡಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಯಲಬುರ್ಗಾ ತಾಲೂಕು ಅಧ್ಯಕ್ಷ ಸುಧೀರ್ ಕೋರ್ಲಹಳ್ಳಿ, ಕುಕನೂರು ಪಟ್ಟಣ ಪಂಚಾಯಿತಿ ಸದಸ್ಯ ಗಗನ್ ನೋಟಗಾರ್, ಗಾವರಾಳ ಗ್ರಾಮ ಪಂಚಾಯಿತಿ ಸದಸ್ಯ ಮಹೇಶ್, ಬ್ಲಾಕ್ ಕಾಂಗ್ರೆಸ್ ಕಾರ್ಯದರ್ಶಿ ಶರಣಪ್ಪ ಗಾಂಜಿ, ಮುಖಂಡರಾದ ಮಲ್ಲಿಕಾರ್ಜುನ್ ಜಕ್ಲಿ ಅವರು ನೂತನ ಸದಸ್ಯೆ ಕಮಲವ್ವ ಅವರನ್ನು ಅಭಿನಂದಿಸಿ ಶುಭ ಹಾರೈಸಿದರು. ಇದಕ್ಕೂ ಮುನ್ನ ಕೆಎಂಎಫ್ ಮಾಜಿ ಅಧ್ಯಕ್ಷ ಭೀಮಾ ನಾಯ್ಕ್ ಸೇರಿದಂತೆ ಅವರ ತಂಡದ ನೂತನ ಸದಸ್ಯರು ಪ್ರಮಾಣ ಪತ್ರಗಳನ್ನು ಪಡೆದು, ಗೆಲುವಿನ ನಗೆ ಬೀರಿದರು.

# ಗುರು ಪೂರ್ಣಿಮೆ ನಿಮಿತ್ಯ ಶಾಲಾ ಮಕ್ಕಳಿಗೆ ಉಚಿತ ಬ್ಯಾಗ ವಿತರಣೆ

## ಭಾರತೀಯ ಗುರು ಪರಂಪರೆ ಜಗತ್ತಿಗೆ ಶ್ರೇಷ್ಠ: ಡಾ. ವೀರಣ್ಣ ಚರಂತಿಮಠ

**ಬಾಗಲಕೋಟೆ:** ವಿಶ್ವಗುರುವಾಗಿದ್ದ ಭಾರತದ ಗುರುಪರಂಪರೆ ಜಗತ್ತಿಗೆ ಶ್ರೇಷ್ಠವಾಗಿದ್ದು ಎಂದು ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷರಾದ ಡಾ. ವೀರಣ್ಣ ಚರಂತಿಮಠ ಹೇಳಿದರು. ಅವರು ನಗರದಪ್ರತಿಷ್ಠಿತಬಿ.ವಿ.ವಿ.ಸಂಘದ ಶಾಲಾ ಆವರಣದಲ್ಲಿ ಮೋಟಗಿ ಶ್ರೀ ಬಸವೇಶ್ವರ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ಶಾಲಾ ಬ್ಯಾಗಗಳನ್ನು ವಿತರಿಸಿ



ಮಾತನಾಡಿದ ಅವರು ಗುರು ಶಿಷ್ಯ ಪರಂಪರೆಯು ಪ್ರಾಚೀನ ಕಾಲದಿಮದಲೂ ಭಾರತದಲ್ಲಿ ಅಸ್ತಿತ್ವದಲ್ಲಿದೆ, ಗುರು ಜ್ಞಾನದ ಮೂಲವಾಗಿದ್ದು, ಶಿಷ್ಯನಿಗೆ ಮಾರ್ಗದರ್ಶನ ನೀಡುತ್ತಾನೆ, ಗುರುವು ಕೇವಲ ವಿದ್ಯೆಯನ್ನು ಮಾತ್ರವಲ್ಲದೆ ಜೀವನದ ಮೌಲ್ಯಗಳು ಮತ್ತು ನೈತಿಕಕತೆಯನ್ನು ಸಹ ಕಲಿಸುತ್ತಾನೆ, ಭಾರತೀಯ ಗುರು-ಶಿಷ್ಯ ಪರಂಪರೆ ಸಂಸ್ಕೃತಿಯ ಅವಿಭಾಜ್ಯ ಅಂಗವಾಗಿದೆ,

ಈ ಪರಂಪರೆಯು ಜ್ಞಾನ ಮತ್ತು ಸಂಸ್ಕೃತಿಯನ್ನು ಒಂದು ತಲೆಮಾರಿನಿಂದ ಮುಂದಿನ ತಲೆಮಾರಿಗೆ ಹಸ್ತಾಂತರಿಸುವಲ್ಲಿ ಪ್ರಮುಖ ಪಾತ್ರ ವಹಸಿಸುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಶಾಲಾ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಹಾಂತೇಶ ಶೆಟ್ಟರ, ಹಾನ ಗಲ್ ಕುಮಾರೇಶ್ವರ ಔಷದ ಹಾಗೂ ಆರ್ಯುವೇದ ವೈದ್ಯಕೀಯ ಮಹಾವಿದ್ಯಾ ಲಯಗಳ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ, ಪದನಿಮಿತ್ಯ ಕಾರ್ಯದರ್ಶಿ ಕೆ.ಎಚ್.ಹೊಸುರು ಮತ್ತು ಶಾಲೆಯ ಮುಖ್ಯೋಪಾಧ್ಯಯರು ಸಿಬ್ಬಂದಿವರ್ಗ ಉಪಸ್ಥಿತರಿದ್ದರು.

# ನಿವೃತ್ತ ಸರ್ಕಾರಿ ನೌಕರರಿಗೆ ಪಿಂಚಣಿ ಮತ್ತು ಕುಟುಂಬ ಪಿಂಚಣಿಯನ್ನು ಪರಿಷ್ಕರಿಸಲು ಪ್ರಧಾನಿಗೆ ಮನವಿ

**ಕೂಡ್ಲಿಗಿ :** ನಿವೃತ್ತ ಸರ್ಕಾರಿ ನೌಕರರಿಗೆ ಪಿಂಚಣಿ ಮತ್ತು ಕುಟುಂಬ ಪಿಂಚಣಿಯನ್ನು ಪರಿಷ್ಕರಿಸಲು ಸಾಧ್ಯವಾಗುವುದಿಲ್ಲ ಎಂಬ ನಿರ್ಣಯವನ್ನು ಕೇಂದ್ರ ಸರ್ಕಾರ ತೆಗೆದುಕೊಳ್ಳಬಾರದು ಎಂದು ಒತ್ತಾಯಿಸಿ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ಪದಾಧಿಕಾರಿಗಳು ಶುಕ್ರವಾರ ತಹಶೀಲ್ದಾರರ ಮೂಲಕ ಪ್ರಧಾನ ಮಂತ್ರಿಗೆ ಮನವಿ ಪತ್ರ ಕಳಿಸಿದರು.

2025ರಲ್ಲಿ ಲೋಕಸಭೆಯಲ್ಲಿ ಕೇಂದ್ರ ಸರ್ಕಾರ ಆರ್ಥಿಕ ಬಿಲ್ಲನ್ನು ಮಂಡಿಸುವಾಗ ಆರ್ಥ ಮಂತ್ರಿ ನಿರ್ಮನ ಸೀತಾರಾಮನ್ ಅವರು 2026ರ ಏಪ್ರಿಲ್ 1ರ ಮೊದಲು ನಿವೃತ್ತಿಯಾಗುವ ಸರ್ಕಾರಿ ನೌಕರರಿಗೆ ಪಿಂಚಣಿ ಮತ್ತು ಕುಟುಂಬ ಪಿಂಚಣಿ ಪರಿಷ್ಕರಿಸಲು ಸಾಧ್ಯವಾಗುವುದಿಲ್ಲ ಎಂಬ ನಿರ್ಣಯ ತೆಗೆದುಕೊಳ್ಳಲಾಗಿದೆ.

ಇದರಿಂದ ಸರ್ಕಾರಿ ನಿವೃತ್ತ ನೌಕರರ ಸಂಕಷ್ಟಕ್ಕೆ ಒಳಗಾಗುತ್ತಾರೆ.

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State

Designed by MKG-9535762618